## ಚೀನಿ ಸೈಬರ್ ವಂಚನಾ ಜಾಲದಲ್ಲಿ ಸಿಲುಕಿದ್ದ ಇಬ್ಬರು ಕನ್ನಡಿಗರ ರಕ್ಷಣೆ..!

• ಉದಯವಾಹಿನಿ, ಬೆಂಗಳೂರು

ಮ್ಯಾನ್ಮಾರ್‌ನಲ್ಲಿರುವ ಚೀನಿ ವಂಚನಾ ಜಾಲದ ಕೇಂದ್ರದಲ್ಲಿ ಸಿಲುಕಿಕೊಂಡಿದ್ದ ಕರ್ನಾಟಕದ ಇಬ್ಬರು ಯುವಕರನ್ನು ಯಶಸ್ವಿಯಾಗಿ ರಕ್ಷಿಸಿ ಭಾರತಕ್ಕೆ ಕರೆತರಲಾಗಿದೆ.

ಕರ್ನಾಟಕ ಸೈಬರ್ ಕಮಾಂಡ್, ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರ, ಜಾರಿ ನಿರ್ದೇಶನಾಲಯ ಹಾಗೂ ಮ್ಯಾನ್ಮಾರ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಜಂಟಿ ಕಾರ್ಯಾಚರಣೆಯ ಫಲವಾಗಿ ಈ ರಕ್ಷಣೆ ಸಾಧ್ಯವಾಗಿದೆ.

ಇಬ್ಬರೂ ಯುವಕರು ಸೋಮವಾರ ತಡರಾತ್ರಿ ಸುರಕ್ಷಿತವಾಗಿ ತಮ್ಮ ಮನೆಗಳಿಗೆ ತಲುಪಿದ್ದಾರೆ. ಕರ್ನಾಟಕ ಸೈಬರ್ ಕಮಾಂಡ್ ನೀಡಿದ ಮಾಹಿತಿ ಪ್ರಕಾರ, ಜಾರಿ ನಿರ್ದೇಶನಾಲಯದ ಉಪನಿರ್ದೇಶಕರಿಂದ ದೊರೆತ ನಿರ್ದಿಷ್ಟ ಮಾಹಿತಿಯ ಆಧಾರದ ಮೇಲೆ ರಕ್ಷಣಾ ಕಾರ್ಯಾಚರಣೆ ಆರಂಭಿಸಲಾಯಿತು. ಬಳಿಕ ಹಾಗೂ ಮ್ಯಾನ್ಮಾರ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಅಧಿಕಾರಿಗಳೊಂದಿಗೆ ನಿರಂತರ ಸಮನ್ವಯ ಸಾಧಿಸಿ ಅತಿ ಕಡಿಮೆ ಅವಧಿಯಲ್ಲಿ ಇಬ್ಬರು ಯುವಕರನ್ನು ರಕ್ಷಿಸುವಲ್ಲಿ ಯಶಸ್ವಿಯಾಯಿತು, ಭಾರತೀಯ ನಾಗರಿಕರ ರಕ್ಷಣೆಯಲ್ಲಿ ತ್ವರಿತ ಮಾಹಿತಿ ವಿನಿಮಯ, ವಿವಿಧ ತನಿಖಾ ಸಂಸ್ಥೆಗಳ ಸಮನ್ವಯ ಹಾಗೂ ರಾಜತಾಂತ್ರಿಕ ಸಹಕಾರ ಎಷ್ಟು ಪರಿಣಾಮಕಾರಿ ಎಂಬುದಕ್ಕೆ ಈ ಕಾರ್ಯಾಚರಣೆ ಉತ್ತಮ ಉದಾಹರಣೆಯಾಗಿದೆ .

# ಜಿಬಿಎ ಅಧಿಕಾರಿಗಳ ಮೇಲೆ ಹಲ್ಲೆ; ಬಿಜೆಪಿ ತೀವ್ರ ಖಂಡನೆ!

• ಉದಯವಾಹಿನಿ, ಬೆಂಗಳೂರು

ಶಿವಾಜಿನಗರದಲ್ಲಿ ಫುಟ್ ಬಾತ್ ಒತ್ತುವರಿ ತೆರವು ಕಾರ್ಯಾಚರಣೆ ನಡೆಸುತ್ತಿದ್ದ ಜಿಬಿಎ ಅಧಿಕಾರಿಯ ಮೇಲೆ ನಡೆದಿರುವ ಮಾರಣಾಂತಿಕ ಹಲ್ಲೆಯನ್ನು ವಿಪಕ್ಷ ನಾಯಕ ಆರ್. ಅಶೋಕ್ ಖಂಡಿಸಿದ್ದಾರೆ.

ಕರ್ತವ್ಯ ನಿರ್ವಹಿಸುತ್ತಿದ್ದ ಸರ್ಕಾರಿ ಅಧಿಕಾರಿಯ ಮೇಲೆಯೇ ಈ ರೀತಿಯ ಹಲ್ಲೆ ನಡೆಯುವುದು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಎಷ್ಟು ಹದಗೆಟ್ಟಿದೆ ಎಂಬುದಕ್ಕೆ ಜೀವಂತ ಸಾಕ್ಷಿಯಾಗಿದೆ ಎಂದು ಟೀಕಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಅವರು ಪೋಸ್ಟ್ ಮಾಡಿದ್ದು, ಬೆಂಗಳೂರಿನ ಬೇರೆ ಭಾಗಗಳಲ್ಲಿ ಒತ್ತುವರಿ ತೆರವು ವೇಳೆ ಕ್ಯಾಮೆರಾ ಮುಂದೆ ರೀಲ್ಸ್ ಮಾಡುವ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅವರೇ, ಈಗ ನಿಮ್ಮ ಮೌನ ಏಕೆ? ಅಧಿಕಾರಿಗಳ ಮೇಲೆ ಹಲ್ಲೆ ನಡೆದಾಗ ಅವರ ಬೆನ್ನಿಗೆ ನಿಲ್ಲುವ ಜವಾಬ್ದಾರಿ ನಿಮ್ಮದಲ್ಲವೇ? ಅಥವಾ ಇಲ್ಲಿ ನಿಮ್ಮ ಓಟ್ ಬ್ಯಾಂಕ್ ರಾಜಕೀಯವೇ ಕಾನೂನಿಗಿಂತ ದೊಡ್ಡದಾಗಿದೆಯೇ ಎಂದು ಪ್ರಶ್ನಿಸಿದ್ದಾರೆ.

ಸಿಎಂ ಡಿಕೆ ಶಿವಕುಮಾರ್ ಅವರೇ, ಕಾನೂನು ಪಾಲನೆಗಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಮೇಲೆ ಮಾರಣಾಂತಿಕ ಹಲ್ಲೆ ನಡೆದರೂ ನಿಮ್ಮ ಸರ್ಕಾರ ಮೌನವಾಗಿರುವುದೇಕೆ? ಕಾನೂನು ಜಾರಿಗಿಂತ ರಾಜಕೀಯ ಲೆಕ್ಕಾಚಾರವೇ ನಿಮಗೆ ಮುಖ್ಯವೇ ಇಂತಹ ಪ್ರಕರಣಗಳಲ್ಲಿ ದುಷ್ಕರ್ಮಿಗಳಿಗೆ ಪರೋಕ್ಷ ರಕ್ಷಣೆ ನೀಡಿದಂತಾಗುವುದಿಲ್ಲವೇ? ಶಿವಾಜಿನಗರದಲ್ಲಿ ಒತ್ತುವರಿ ತೆರವು ಮಾಡಲು ಸರ್ಕಾರಕ್ಕೆ ಧೈರ್ಯವಿಲ್ಲವೇ? ಅಥವಾ ಕೆಲವು ಪ್ರದೇಶಗಳಿಗೆ ಮಾತ್ರ ಕಾನೂನು ಅನ್ವಯಿಸುವುದಿಲ್ಲವೇ? ರಾಜ್ಯದಲ್ಲಿ ಎರಡು ರೀತಿಯ ಕಾನೂನು ಜಾರಿಯೇ? ಎಂದಿದ್ದಾರೆ.

### ಸುರಕ್ಷತೆಯನ್ನು ಖಚಿತಪಡಿಸಬೇಕು



☛ ಉದಯವಾಹಿನಿ ಚಿತ್ರ

ದೋಷಿಗಳನ್ನು ತಕ್ಷಣ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಕರ್ತವ್ಯ ನಿರ್ವಹಿಸುವ ಅಧಿಕಾರಿಗಳ ಸುರಕ್ಷತೆಯನ್ನು ಖಚಿತಪಡಿಸಬೇಕು. ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂಬುದನ್ನು ಮಾತಿನಲ್ಲಿ ಅಲ್ಲ, ಕಾರ್ಯದಲ್ಲಿ ಸಾಬೀತುಪಡಿಸಿ ಎಂದು ಒತ್ತಾಯಿಸಿದ್ದಾರೆ.

## ಎಸ್ಐಆರ್‌ವೇಳೆ ಲೋಪ: ಮೈಕೆಲ್‌ಪಾಳ್ಯದಲ್ಲಿ ಮತದಾರರಿಗೆ ಸಿಗದ 2002ರ ದಾಖಲೆ



☛ ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮೈಕೆಲ್‌ಪಾಳ್ಯದ ಅನೇಕ ನಿವಾಸಿಗಳು ಭಯಭೀತ ಸ್ಥಿತಿಯಲ್ಲಿದ್ದಾರೆ, ಮತದಾರರ ಪಟ್ಟಿಯಲ್ಲಿರುವ ತಮ್ಮ ವಿವರಗಳನ್ನು ಹುಡುಕಲು ಅತ್ತಿಂದಿತ್ತ ಇತ್ತಿಂದತ್ತ ಓಡುತ್ತಿದ್ದಾರೆ. ಆದರೂ ಸಹ ಮೈಕೆಲ್‌ಪಾಳ್ಯದ ಸುಮಾರು 3,000 ಮತದಾರರು 2002 ರ ಪಟ್ಟಿಯಲ್ಲಿ ತಮ್ಮ ವಿವರಗಳನ್ನು ಕಂಡುಹಿಡಿಯಲು ಸಾಧ್ಯವಾಗುತ್ತಿಲ್ಲ.

ನಾವು ಎರಡು ಮತಗಟ್ಟೆಗಳಿಂದ ಬಂದವರಾಗಿದ್ದು, ಅವುಗಳ ಹಳೆಯ ವಿವರಗಳು ಎಲ್ಲಿಯೂ ಸಿಗುತ್ತಿಲ್ಲ. ಸಿವಿ ರಾಮನ್ ನಗರ ಕ್ಷೇತ್ರದ ಪುನರ್ವಿಂಗಡಣೆ ಮತ್ತು ರಚನೆಯ ಮೊದಲು ನಮ್ಮ ಮತಗಟ್ಟೆಗಳು ವರ್ತೂರು ಕ್ಷೇತ್ರ ಸಂಖ್ಯೆ 90ರ ಅಡಿಯಲ್ಲಿ ಬರುವ ಮೈಕೆಲ್‌ಪಾಳ್ಯದ ಶ್ರೀಚೆನ್ನಕೇಶವ ಪ್ರಾಥಮಿಕ ಶಾಲೆಯಲ್ಲಿದ್ದವು. ಕಳೆದ ಸಂಸತ್ತಿನ ಮತ್ತು ವಿಧಾನಸಭಾ ಚುನಾವಣೆಗಳ ಸಮಯದಲ್ಲಿ, ನಾವು ಮೈಕೆಲ್‌ಪಾಳ್ಯದ ಪುನರುತ್ಥಾನ ಕಾನ್ವೆಂಟ್ ಶಾಲೆಯಲ್ಲಿ ಮತ ಚಲಾಯಿಸಿದ್ದೇವೆ, ಆದರೆ ಇಲ್ಲಿ ನಮ್ಮ ಹಳೆಯ ವಿವರಗಳು ಎಲ್ಲಿಯೂ ಸಿಗುತ್ತಿಲ್ಲಎಂದು ಲೋವರ್ ಮೈಕೆಲ್‌ಪಾಳ್ಯ ನಿವಾಸಿಗಳ ಸಂಘದ ಅಧ್ಯಕ್ಷ ಪಿಜೆ ಅಲೆಕ್ಸಾಂಡರ್ ಆರೋಪಿಸಿದ್ದಾರೆ. ಇಂದಿರಾನಗರದ ಡಿಫೆನ್ಸ್ ಕಾಲೋನಿಯಲ್ಲಿರುವ ವಾರ್ಡ್ ಕಚೇರಿಯಲ್ಲಿ ಆರ್‌ಒ ಅವರನ್ನು ಸಂಪರ್ಕಿಸಿದಾಗ, 2002 ರ ಮೊದಲು ಮೈಕೆಲ್‌ಪಾಳ್ಯದ ಮತದಾರರ ಪಟ್ಟಿಯನ್ನು ಪತ್ತೆಹಚ್ಚಲು ಸಾಧ್ಯವಿಲ್ಲ ಎಂದು ಹೇಳಿದರು.

ನಾವು ಜಿಲ್ಲಾಧಿಕಾರಿ ಕಾಂತರಾಜು ಅವರನ್ನು ಸಹ ಭೇಟಿ ಮಾಡಿದ್ದೇವೆ. ಅವರು ಅದನ್ನು ಪರಿಶೀಲಿಸುವುದಾಗಿ ಹೇಳಿದರು.

## ಆಗಸ್ಟ್ ಅಧಿವೇಶನಕ್ಕೂ ಮುನ್ನ ರಾಜ್ಯಕ್ಕೆ ಹೊಸ ಸ್ಪೀಕರ್ ಎಚ್.ಕೆ. ಪಾಟೀಲ್ ಹೆಸರು ಮುಂಚೂಣಿಯಲ್ಲಿ..!

☛ ಉದಯವಾಹಿನಿ ಚಿತ್ರ



• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದ ಸರ್ಕಾರ ಶೀಘ್ರದಲ್ಲೇ ಸಚಿವ ಸಂಪುಟ ವಿಸ್ತರಣೆ ಪೂರ್ಣಗೊಳಿಸುವ ನಿರೀಕ್ಷೆಯಲ್ಲಿದ್ದು, ಇದರ ನಡುವಲ್ಲೇ ರಾಜ್ಯದ ಮುಂದಿನ ವಿಧಾನಸಭಾಧ್ಯಕ್ಷರ (ಸ್ಪೀಕರ್) ಆಯ್ಕೆ ಕುರಿತು ರಾಜಕೀಯ ವಲಯದಲ್ಲಿ ಚರ್ಚೆ ಜೋರಾಗಿದೆ.

ಇದರಂತೆ ಆಗಸ್ಟ್ ಮೊದಲ ವಾರದಲ್ಲಿ ನಡೆಯುವ ಸಾಧ್ಯತೆಯಿರುವ ವಿಧಾನಮಂಡಲ ಅಧಿವೇಶನಕ್ಕೂ ಮುನ್ನವೇ ಹೊಸ ಸ್ಪೀಕರ್‌ರನ್ನು ಆಯ್ಕೆ ಮಾಡುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ.

ಡಿಕೆ ಶಿವಕುಮಾರ್ ಸಚಿವ ಸಂಪುಟಕ್ಕೆ ಸೇರ್ಪಡೆಯಾದ ಬಳಿಕ ಯು.ಟಿ. ಖಾದರ್ ಅವರು ವಿಧಾನಸಭಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಆ ಬಳಿಕ ಸ್ಪೀಕರ್ ಹುದ್ದೆ ಖಾಲಿಯಾಗಿದೆ. ಹೀಗಾಗಿ ಅಧಿವೇಶನಕ್ಕೂ ಮುನ್ನ ಹೊಸ ಅಧ್ಯಕ್ಷರನ್ನು ಆಯ್ಕೆ ಮಾಡಲು ಕಾಂಗ್ರೆಸ್ ನಾಯಕತ್ವ ಸಿದ್ಧತೆ ನಡೆಸಿದೆ. ಸ್ಪೀಕರ್ ಹುದ್ದೆಗೆ ಹಿರಿಯ ಶಾಸಕರಾದ ಎಚ್.ಕೆ. ಪಾಟೀಲ್ (ಗದಗ), ಬಿ.ಆರ್. ಪಾಟೀಲ್ (ಆಳಂದ), ಸಿ.ಎಸ್. ನಾಡಗೌಡ (ಮುದ್ದೇಬಿಹಾಳ) ಹಾಗೂ ಮಾಜಿ ಸಚಿವ ದಿನೇಶ್ ಗುಂಡೂರಾವ್ (ಗಾಂಧಿನಗರ) ಅವರ ಹೆಸರುಗಳು ಚರ್ಚೆಯಲ್ಲಿವೆ. ಕಾಂಗ್ರೆಸ್ ಹಿರಿಯ ನಾಯಕರೊಬ್ಬರು ಮಾತನಾಡಿ, ಅಂತಿಮವಾಗಿ ಸ್ಪೀಕರ್ ಹುದ್ದೆಗೆ ಯಾರನ್ನು ಆಯ್ಕೆ ಮಾಡಬೇಕು ಎಂಬುದನ್ನು ಪಕ್ಷದ ಹೈಕಮಾಂಡ್ ನಿರ್ಧರಿಸಲಿದೆ ಎಂದು ತಿಳಿಸಿದ್ದಾರೆ.

ಕೆಲವು ಹೆಸರುಗಳು ಪರಿಗಣನೆಯಲ್ಲಿವೆ. ಹಿರಿಯ ಶಾಸಕ ಹಾಗೂ ಮಾಜಿ ಸಚಿವ ಎಚ್.ಕೆ. ಪಾಟೀಲ್ ಅವರು ಮುಂಚೂಣಿಯಲ್ಲಿದ್ದಾರೆ. ಅವರಿಗೆ ಕಾನೂನು ಮತ್ತು ವಿಧಾನಸಭೆಯ ಕಲಾಪಗಳ ಬಗ್ಗೆ ಅಪಾರ ಅನುಭವವಿದೆ. ಆದ್ದರಿಂದ ಅವರು ಪ್ರಮುಖ ಅಭ್ಯರ್ಥಿಯಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

## 112ಗೆ ಕರೆ ಬಂದಾಕ್ಷಣ ಸ್ಥಳಕ್ಕೆ ಪೊಲೀಸರು ತೆರಳಬೇಕು- ಗೃಹ ಇಲಾಖೆ ಮಹತ್ವದ ಆದೇಶ!

• ಉದಯವಾಹಿನಿ, ಬೆಂಗಳೂರು

ನಗರದ ಪೊಲೀಸರು ತುರ್ತು ಸ್ಪಂದನಾ ವ್ಯವಸ್ಥೆಯಲ್ಲಿ ಪ್ರಮುಖ ಬದಲಾವಣೆಯೊಂದನ್ನು ಜಾರಿಗೆ ತಂದಿದ್ದಾರೆ. ಇನ್ಮುಂದೆ ಘಟನೆ ನಡೆದ ಸ್ಥಳ ಠಾಣೆ ವ್ಯಾಪ್ತಿಗೆ ಬರುವುದಿಲ್ಲ ಎಂಬ ನೆಪ ಹೇಳಿ, ಅಧಿಕಾರಿಗಳು ಅಲ್ಲಿಗೆ ತೆರಳಲು ನಿರಾಕರಿಸುವಂತಿಲ್ಲ. 112 ಸಹಾಯವಾಣಿಯ ಮೂಲಕ ತುರ್ತು ಕರೆ ಬಂದಾಗ ತಕ್ಷಣವೇ ಘಟನಾ ಸ್ಥಳಕ್ಕೆ ಧಾವಿಸುವಂತೆ ಪೊಲೀಸ್ ಸಿಬ್ಬಂದಿಗೆ ನಿರ್ದೇಶಿಸಲಾಗಿದೆ. ಈ ಹಿಂದೆ ಘಟನೆಯು ತಮ್ಮ ವ್ಯಾಪ್ತಿಗೆ ಬರುವುದಿಲ್ಲ ಎಂದು ಹೇಳಿ ಕರೆ ಮಾಡಿದವರನ್ನು ಬೇರೆ ಪೊಲೀಸ್ ಠಾಣೆಗೆ ಕಳುಹಿಸುವ ಮೂಲಕ ಪೊಲೀಸರು ವಿಳಂಬ ಮಾಡುತ್ತಿದ್ದಾರೆ ಎಂಬ ದೂರುಗಳು ಕೇಳಿಬಂದಿದ್ದವು. ಸಾರ್ವಜನಿಕರಿಂದ ತೀವ್ರ ಟೀಕೆಗೆ ಗುರಿಯಾಗಿದ್ದಲ್ಲದೆ, ಪೊಲೀಸ್ ಇಲಾಖೆಗೆ ಮುಜುಗರವನ್ನೂ ಉಂಟುಮಾಡಿತ್ತು. ಜೀವ ರಕ್ಷಣೆ ಮತ್ತು ಸಂತ್ರಸ್ತರಿಗೆ ಸಹಾಯ ಮಾಡುವುದಕ್ಕೆ ಆದ್ಯತೆ ನೀಡುವಂತೆ ಇಲಾಖೆಯು ಅಧಿಕಾರಿಗಳಿಗೆ ನಿರ್ದೇಶನ ನೀಡಿದೆ.

## 500 ರೂ ನಕಲಿ ನೋಟು ಮುದ್ರಿಸಿ ಚಲಾವಣೆ: ಇಬ್ಬರ ಬಂಧನ; ಬೆಚ್ಚಿ ಬಿದ್ದ ರಾಜಧಾನಿ ಜನ!

• ಉದಯವಾಹಿನಿ, ಬೆಂಗಳೂರು

500 ರೂಪಾಯಿ ನಕಲಿ ನೋಟುಗಳನ್ನು ಮುದ್ರಿಸಿ ಚಲಾವಣೆ ಮಾಡುತ್ತಿದ್ದ ಆರೋಪದ ಮೇಲೆ ಅಂತರಾಜ್ಯ ಆರೋಪಿ ಸೇರಿದಂತೆ ಇಬ್ಬರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಂಧಿತ ಆರೋಪಿಗಳನ್ನು ಮೈಸೂರು ಮೂಲದ ಅರವಿಂದ್(47) ಮತ್ತು ಚೆನ್ನೈ ನಿವಾಸಿ ವೆಂಕಟ ಸುಬ್ರಮಣಿಯನ್(ಸುಮಾರು 60) ಎಂದು ಗುರುತಿಸಲಾಗಿದೆ. 500 ರೂಪಾಯಿ ನಕಲಿ ನೋಟುಗಳು, ಫೋಟೋಕಾಪಿ ಯಂತ್ರ, ಲ್ಯಾಪ್‌ಟಾಪ್, ಕಾರು, ಮೊಬೈಲ್ ಫೋನ್‌ಗಳು ಮತ್ತು ಅಪರಾಧಕ್ಕೆ ಬಳಸುತ್ತಿದ್ದ ಇತರೆ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ವಶಪಡಿಸಿಕೊಂಡ ವಸ್ತುಗಳ ಒಟ್ಟು ಮೌಲ್ಯ 3.29 ಲಕ್ಷ ರೂ. ಎಂದು ಅಂದಾಜಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಜುಲೈ 3 ರಂದು, ಬಿಡಿಎ ಅಪಾರ್ಟ್‌ಮೆಂಟ್‌ನಲ್ಲಿ ವಾಸಿಸುವ ಬಾಡಿಗೆದಾರರೊಬ್ಬರು ನಕಲಿ ನೋಟುಗಳನ್ನು ಚಲಾವಣೆ ಮಾಡುತ್ತಿದ್ದಾರೆ ಎಂಬ ಸುಳಿವು ಕುಂಬಳಗೋಡು ಪೊಲೀಸರಿಗೆ ಸಿಕ್ಕಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

# SC/ST ಬ್ಯಾಕ್‌ಲಾಗ್ ಹುದ್ದೆಗಳ ಶೀಘ್ರ ಭರ್ತಿ: DCM ಪರಮೇಶ್ವರ್

## ನಮ್ಮ ಸರ್ಕಾರ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 72 ಸಾವಿರ ಹುದ್ದೆಗಳನ್ನು ಭರ್ತಿ ಮಾಡಲಿದೆ

• ಉದಯವಾಹಿನಿ, ಬೆಂಗಳೂರು

ವಿಶ್ವವಿದ್ಯಾಲಯಗಳು ಹಾಗೂ ಇತರೆ ಸರ್ಕಾರಿ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಾಗಿರುವ ಖಾಲಿ ಉಳಿದಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಶೀಘ್ರದಲ್ಲೇ ಭರ್ತಿ ಮಾಡಲಾಗುವುದು ಎಂದು ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ದಲಿತರ ನಿಯೋಗಕ್ಕೆ ಭರವಸೆ ನೀಡಿದರು.

**1** ಖಾಲಿ ಇರುವ 72 ಸಾವಿರ ಹುದ್ದೆ

**2** ಎಸ್‌ಸಿ ಮತ್ತು ಎಸ್‌ಟಿ ಅಭ್ಯರ್ಥಿ

**3** ಸರ್ಕಾರ ಶೀಘ್ರದಲ್ಲೇ ನಿರ್ಧಾರ

ನಿಯೋಗದೊಂದಿಗೆ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಸರ್ಕಾರ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 72 ಸಾವಿರ ಹುದ್ದೆಗಳನ್ನು ಭರ್ತಿ ಮಾಡಲಿದೆ. ಮೀಸಲಾತಿ ನಿಯಮದಂತೆ ಎಸ್‌ಸಿ ಮತ್ತು ಎಸ್‌ಟಿ ಅಭ್ಯರ್ಥಿಗಳನ್ನು ನೇಮಕ ಮಾಡಲಾಗುತ್ತದೆ. ಇದಲ್ಲದೆ, ವಿವಿಧ ವರ್ಗಗಳಿಗೆ ಮೀಸಲಾಗಿದ್ದ ಅನೇಕ ಹುದ್ದೆಗಳು ಇನ್ನೂ ಖಾಲಿ ಉಳಿದಿವೆ. ವಿಶ್ವವಿದ್ಯಾಲಯಗಳು ಹಾಗೂ ಕೆಲವು ಪ್ರಮುಖ ಇಲಾಖೆಗಳಲ್ಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನೂ ಭರ್ತಿ ಮಾಡಲಾಗುವುದು. ಈ ಕುರಿತು ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಲಾಗುವುದು ಎಂದು ಹೇಳಿದರು.

ಪಿಟಿಸಿಎಲ್ ಕಾಯ್ದೆ ತಿದ್ದುಪಡಿ ಕುರಿತು ಮಾತನಾಡಿದ ಅವರು, ದಲಿತರಿಗೆ ಮಂಜೂರಾಗಿದ್ದ ಭೂಮಿಯನ್ನು ಇತರರಿಗೆ ವರ್ಗಾಯಿಸಲು ಅನುಕೂಲವಾಗುವಂತೆ ಕಾಯ್ದೆಯಲ್ಲಿದ್ದ ಡಿ ಕಲಂವನ್ನು ತೆಗೆದುಹಾಕಲಾಗಿದೆ. ಆದರೆ ಇದರ ಅನುಷ್ಠಾನ ವಿಳಂಬವಾಗುತ್ತಿರುವ ಬಗ್ಗೆ ಆತಂಕ ವ್ಯಕ್ತವಾಗಿದೆ. ಈ ವಿಷಯದಲ್ಲಿ ಸರ್ಕಾರ ಶೀಘ್ರದಲ್ಲೇ ಸೂಕ್ತ ನಿರ್ಧಾರ ಕೈಗೊಳ್ಳಲಿದೆ ಎಂದು ನಿಯೋಗಕ್ಕೆ ಭರವಸೆ ನೀಡಿದ್ದೇನೆ ಎಂದರು.

ಕೆಲವು ದಲಿತ ಸಂಘರ್ಷ ಸಮಿತಿ ಮುಖಂಡರು, ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಲಾಭ ದಲಿತ ಸಮುದಾಯಕ್ಕೆ ತಲುಪುತ್ತಿಲ್ಲ ಎಂಬ ಆರೋಪದ ಕುರಿತು ಪ್ರತಿಕ್ರಿಯಿಸಿದ ಅವರು, ಗ್ಯಾರಂಟಿ ಯೋಜನೆಗಳ ಪ್ರಯೋಜನ ಪಡೆಯದಿರುವ ದಲಿತ ಕುಟುಂಬಗಳನ್ನು ಗುರುತಿಸಿ, ಅವರಿಗೆ ಸೌಲಭ್ಯ ತಲುಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ವಿದೇಶದಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳ ಶುಲ್ಕವನ್ನು ಸರ್ಕಾರವೇ ಭರಿಸಲಿದೆ ಎಂದು ಡಾ. ಪರಮೇಶ್ವರ್ ಹೇಳಿದರು. ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಮಾವಳ್ಳಿ ಶಂಕರ್, ಪ್ರೊ. ಇಂದಿರಾ ಕೃಷ್ಣಪ್ಪ, ಎಂ. ವೆಂಕಟಸ್ವಾಮಿ, ಶ್ರೀಧರ್ ಕಾಳಿವೀರ, ಸುಬ್ಬು ಹೊಲೆಯಾರ್, ಕಂದಾಯ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ, ಕಂದಾಯ ಆಯುಕ್ತೆ ಮೀನಾ ನಾಗರಾಜ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೋಹನ್ ರಾಜ್ ಉಪಸ್ಥಿತರಿದ್ದರು.

☛ ಉದಯವಾಹಿನಿ ಚಿತ್ರ



### ಮುಖ್ಯಮಂತ್ರಿಯ ವರೊಂದಿಗೆ ಚರ್ಚಿಸಿ

ಪ್ರಸ್ತುತ ವಿದ್ಯಾರ್ಥಿಯೊಬ್ಬರಿಗೆ ನೀಡಲಾಗುತ್ತಿರುವ 1,800 ಸ್ನಾತಕೋತ್ತರ ವಿದ್ಯಾರ್ಥಿವೇತನ (ಪೋಸ್ಟ್-ಮೆಟ್ರಿಕ್ ಸ್ಕಾಲರ್‌ಶಿಪ್) ವನ್ನು 3,000 ರೂಪಾಯಿಗೆ ಹೆಚ್ಚಿಸಬೇಕು ಎಂಬ ಬೇಡಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ಈ ವಿಷಯವನ್ನು ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿ ಪರಿಷ್ಕರಿಸಲಾಗುವುದು. ಮುಂದಿನ ಬಜೆಟ್‌ನಲ್ಲಿ ಇದನ್ನು ಸೇರಿಸಲಾಗುವುದು ಎಂದು ಭರವಸೆ ನೀಡಿದರು.

> ಕಳೆದ ವರ್ಷ ವಿಶೇಷಚೇತನರ ವಿಶ್ವಕಪ್ ಕ್ರಿಕೆಟ್ ಗೆದ್ದ ಭಾರತೀಯ ತಂಡದ ಸದಸ್ಯೆಯಾಗಿದ್ದ ನೀಲವ್ವ ನಿಂಗವ್ವ ಹರಿಜನ್ ಅವರು ಶೆಡ್‌ನಲ್ಲಿ ವಾಸಿಸುತ್ತಿರುವ ಹಿನ್ನೆಲೆ, ಕಳೆದ ವರ್ಷ ಸರ್ಕಾರದಿಂದ 5 ಲಕ್ಷ ರೂಪಾಯಿ ನೆರವು ನೀಡಲಾಗಿದೆ. ಶೀಘ್ರದಲ್ಲೇ ಅವರಿಗೆ ವಸತಿ ನಿವೇಶನವನ್ನೂ ಹಂಚಿಕೆ ಮಾಡಲಾಗುವುದು ಎಂದು ತಿಳಿಸಿದರು.



## Airport ನಿರ್ಮಿಸಿದರೆ ಹೆಚ್ಚು ಅನುಕೂಲ; ಸೋಮಣ್ಣ ಹೇಳಿಕೆಗೆ ಪರಮೇಶ್ವರ್ ಬೆಂಬಲ

ಬೆಂಗಳೂರು ಸಮೀಪ ಎರಡನೇ ವಿಮಾನ ನಿಲ್ದಾಣ ನಿರ್ಮಿಸುವ ಬದಲು ತುಮಕೂರು ಜಿಲ್ಲೆಯ ಶಿರಾದಲ್ಲಿ ಸ್ಥಾಪಿಸಬೇಕು ಎಂಬ ಕೇಂದ್ರ ಸಚಿವ ವಿ. ಸೋಮಣ್ಣ ಅವರ ಆಗ್ರಹದ ನಡುವೆ ಕರ್ನಾಟಕದ ಡಿಸಿಎಂ ಪರಮೇಶ್ವರ್ ಕೂಡ ಇದೇ ರೀತಿ ಅಭಿಪ್ರಾಯಪಟ್ಟಿದ್ದಾರೆ.

ತುಮಕೂರಿನಲ್ಲಿ ಅಂತಾರಾಷ್ಟ್ರೀಯ ಏರ್‌ಪೋರ್ಟ್ ನಿರ್ಮಿಸಿ ಎಂದು ಕಳೆದ 25 ವರ್ಷಗಳಿಂದ ಹೇಳುತ್ತಿದ್ದೇನೆ. ಆ ಮೇಲೆ ಬಿಡದಿ ಸೇರಿದಂತೆ ಬೇರೆಬೇರೆ ಜಾಗ ಗುರುತಿಸಿದ್ದಾರೆ. ತುಮಕೂರು 20 ಜಿಲ್ಲೆಗಳ ಹೆಬ್ಬಾಗಿಲು, ಇಲ್ಲಿ ವಿಮಾನ ನಿಲ್ದಾಣ ನಿರ್ಮಿಸಿದರೆ ನಮಗೂ ಅನುಕೂಲವಾಗುತ್ತೆ ಎಂದವರು ತಿಳಿಸಿದ್ದಾರೆ.



ತುಮಕೂರು ಜಿಲ್ಲೆಯ ಕೊರಟಗೆರೆ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುವ ಪರಮೇಶ್ವರ, ಸಿರಾದಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸಿದರೆ ತುಮಕೂರು ಮಾತ್ರವಲ್ಲದೆ ಈ ಪ್ರದೇಶದ ಮೂಲಕ ಬೆಂಗಳೂರಿಗೆ ಸಂಪರ್ಕ ಹೊಂದಿದ ಸುಮಾರು 20 ಜಿಲ್ಲೆಗಳಿಗೆ ಉಪಯೋಗವಾಗುತ್ತದೆ ಎಂದು ಹೇಳಿದರು.

ತುಮಕೂರು ಲೋಕಸಭಾ ಸಂಸದ ಸೋಮಣ್ಣ ಅವರು ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕಿಂಜರಪು ರಾಮಮೋಹನ್ ನಾಯ್ಡು ಅವರಿಗೆ ಪ್ರಸ್ತಾವಿತ ವಿಮಾನ ನಿಲ್ದಾಣವನ್ನು ಸಿರಾದಲ್ಲಿ ಸ್ಥಾಪಿಸಬೇಕೆಂದು ಪತ್ರ ಬರೆದ ಕೆಲವು ದಿನಗಳ ನಂತರ ಪರಮೇಶ್ವರ್ ಈ ಹೇಳಿಕೆ ನೀಡಿದ್ದಾರೆ.

## ಏನಿದು 'ಗ್ರೇಟರ್ ಇಂಟಿಗ್ರೇಟೆಡ್ ಟೌನ್‌ಶಿಪ್' ಬಿಡದಿಯೇ ಏಕೆ?

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ವ್ಯಾಪಕ ಸುದ್ದಿಗೆ ಗ್ರಾಸವಾಗುತ್ತಿರುವ ಬಿಡದಿ ಟೌನ್ ಶಿಪ್ ವಿಚಾರವಾಗಿ ಸರ್ಕಾರ ಮತ್ತು ಸ್ಥಳೀಯರ ನಡುವೆ ಹಗ್ಗ ಜಗ್ಗಾಟ ಮುಂದುವರೆದಿದ್ದು, ಈ ಬಹು ನಿರೀಕ್ಷಿತ ಯೋಜನೆಯ ಸಂಪೂರ್ಣ ಮಾಹಿತಿ ಇಲ್ಲಿದೆ.ಹೌದು... ಸಂಚಾರ ದಟ್ಟಣೆ, ವಸತಿ ಕೊರತೆ, ನೀರಿನ ಸಮಸ್ಯೆ, ನಗರ ಮೂಲಸೌಕರ್ಯಗಳ ಮೇಲಿನ ಹೆಚ್ಚುತ್ತಿರುವ ಒತ್ತಡಕ್ಕೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಕರ್ನಾಟಕ ಸರ್ಕಾರ 'ಗ್ರೇಟರ್ ಬಿಡದಿ ಇಂಟಿಗ್ರೇಟೆಡ್ ಟೌನ್‌ಶಿಪ್' ಯೋಜನೆಯನ್ನು ಪುನರುಜ್ಜೀವನಗೊಳಿಸಿದೆ.

ಬೆಂಗಳೂರು-ಮೈಸೂರು ಕಾರಿಡಾರ್‌ನಲ್ಲಿ ನಿರ್ಮಾಣವಾಗಲಿರುವ ಈ ಯೋಜನೆ, ಭಾರತದ ಮೊದಲ ಕೃತಕ ಬುದ್ಧಿಮತ್ತೆ ಆಧಾರಿತ ಸಮಗ್ರ ನಗರ ಎಂಬ ಹೆಗ್ಗಳಿಕೆಗೆ ಪಾತ್ರವಾಗುವ ಗುರಿ ಹೊಂದಿದೆ. ಜೊತೆಗೆ, ಬೆಂಗಳೂರಿಗೆ ಪರ್ಯಾಯವಾಗಿ ಮತ್ತೊಂದು ಪ್ರಮುಖ ನಗರ ಕೇಂದ್ರವನ್ನು ನಿರ್ಮಿಸುವ ಉದ್ದೇಶವೂ ಸರ್ಕಾರಕ್ಕಿದೆ.

ಈ ಯೋಜನೆ 7,431 ಎಕರೆ ಪ್ರದೇಶದಲ್ಲಿ ಅಭಿವೃದ್ಧಿಯಾಗಲಿದ್ದು, ವಸತಿ, ಕೈಗಾರಿಕೆ, ಕಚೇರಿಗಳು, ಶಾಲೆಗಳು, ಆಸ್ಪತ್ರೆಗಳು, ಉದ್ಯಾನಗಳು ಹಾಗೂ ಇತರೆ ನಾಗರಿಕ ಸೌಲಭ್ಯಗಳನ್ನು ಒಳಗೊಂಡ ಸಮಗ್ರ ನಗರವಾಗಿ ರೂಪುಗೊಳ್ಳಲಿದೆ. ಇದರಲ್ಲಿ ಸುಮಾರು 2,000 ಎಕರೆ ಭೂಮಿಯನ್ನು ಕೈಗಾರಿಕೆಗಳು ಮತ್ತು ಸಂಬಂಧಿತ ವಲಯಗಳಿಗೆ ಮೀಸಲಿಡಲಾಗುತ್ತಿದೆ. 2006 ಬೆಂಗಳೂರಿನ ಸುತ್ತ ಐದು ಉಪಗ್ರಹ ನಗರಗಳನ್ನು ನಿರ್ಮಿಸುವ ಪ್ರಸ್ತಾವನೆ ಬಿಡದಿ ಕೂಡ ಇದರಲ್ಲಿ ಸೇರಿತ್ತು. 2007 ಡಿಎಲ್‌ಎಫ್ ಸಂಸ್ಥೆಯನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಅಭಿವೃದ್ಧಿ ಪಾಲುದಾರರನ್ನಾಗಿ ಆಯ್ಕೆ ಮಾಡಲಾಯಿತು. ಆದರೆ ಡಿಎಲ್‌ಎಫ್ ಹಿಂದೆ ಸರಿದ ಪರಿಣಾಮ ಯೋಜನೆ ಸ್ಥಗಿತಗೊಂಡಿತು. 2023 ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಗರಾಭಿವೃದ್ಧಿ ಸಚಿವರಾಗಿದ್ದಾಗ ಯೋಜನೆಯನ್ನು ಮತ್ತೆ ಕೈಗೆತ್ತಿಕೊಂಡು ಜೀವಂತಗೊಳಿಸಿದರು. ಈ ಯೋಜನೆಯ ಉದ್ದೇಶ, ಜನರು ವಾಸ, ಉದ್ಯೋಗ ಹಾಗೂ ಅಗತ್ಯ ಸೇವೆಗಳನ್ನು ಒಂದೇ ನಗರದಲ್ಲಿ ಪಡೆಯುವಂತೆ ಮಾಡುವುದು.

ಇದರಿಂದ ಬೆಂಗಳೂರಿನ ಮೇಲಿನ ಜನಸಂಖ್ಯೆ ಮತ್ತು ಮೂಲಸೌಕರ್ಯಗಳ ಒತ್ತಡ ಕಡಿಮೆಯಾಗಲಿದೆ. ಜೊತೆಗೆ ಸಂಚಾರ ದಟ್ಟಣೆ, ಅಸಮತೋಲಿತ ನಗರೀಕರಣ, ಅಂತರ್ಜಲ ಕುಸಿತ ಹಾಗೂ ಪ್ರವಾಹದಂತಹ ಸಮಸ್ಯೆಗಳಿಗೆ ಸಮಗ್ರ ನಗರ ಯೋಜನೆಯ ಮೂಲಕ ಪರಿಹಾರ ಕಲ್ಪಿಸುವ ಗುರಿ ಹೊಂದಲಾಗಿದೆ.

## ಶಿವಾಜಿನಗರದಲ್ಲಿ ಫುಟ್‌ಪಾತ್ ಒತ್ತುವರಿ ತೆರವಿಗೆ ಅಡ್ಡಿ ಪ್ರಕರಣ: ಪ್ರಮುಖ ಆರೋಪಿ ಸೆರೆ

• ಉದಯವಾಹಿನಿ, ಬೆಂಗಳೂರು

ಪಾದಚಾರಿ ಮಾರ್ಗಗಳ ಅಕ್ರಮ ಒತ್ತುವರಿ ತೆರವು ಕಾರ್ಯಾಚರಣೆಗೆ ತೆರಳಿದ್ದ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಿದ್ದ ಪ್ರಕರಣದ ಪ್ರಮುಖ ಆರೋಪಿಯನ್ನು ಕಮರ್ಷಿಯಲ್ ಸ್ಟ್ರೀಟ್ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಸವರಾಜ್ ಪಡುಕೋಟೆ ಎಂಬಾತನೇ ಬಂಧಿತ ಆರೋಪಿ. ಮಂಗಳವಾರ ಬೆಳಗ್ಗೆ ಶಿವಾಜಿನಗರದಲ್ಲಿ ಜಿಬಿಎ ವತಿಯಿಂದ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ನಡೆಯುತ್ತಿತ್ತು. ಸ್ಥಳಕ್ಕೆ ನಮ್ಮ ಕರ್ನಾಟಕ ಸೇನೆ ಹೆಸರಿನ ಸಂಘಟನೆ ರಾಜ್ಯಾಧ್ಯಕ್ಷ ಬಸವರಾಜ್ ಪಡುಕೋಟೆ ನೇತೃತ್ವದಲ್ಲಿ ಬಂದಿದ್ದ ಆರೋಪಿಗಳು, ಪಾಲಿಕೆ ಸಿಬ್ಬಂದಿ ಮತ್ತು ಪೊಲೀಸರ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದರು. ಘಟನೆ ಬಳಿಕ ತಲೆಮರೆಸಿಕೊಂಡಿದ್ದ ಬಸವರಾಜ್, 'ನಾವು ಫುಟ್‌ಪಾತ್ ತೆರವು ವಿಚಾರಕ್ಕೆ ಗಲಾಟೆ ಮಾಡಿಲ್ಲ. ಸ್ಥಳದಲ್ಲಿ ನಮ್ಮ ಸಂಘಟನೆಯಿಂದ ಕನ್ನಡ ಧ್ವಜ ಹಾರಿಸಲಾಗಿತ್ತು ಮತ್ತು ಗಣೇಶ ದೇವಸ್ಥಾನವಿತ್ತು. ಸ್ಥಳದಲ್ಲಿದ್ದ ಅಧಿಕಾರಿಗಳು ಯಾವುದಾದರೇನು ತೆಗೆದುಹಾಕಿ ಎಂದು ಉದ್ಧಟತನದಿಂದ ಮಾತನಾಡಿದರು. ಅದಕ್ಕೆ ನಾವು ಪ್ರತಿರೋಧವೊಡ್ಡಿದ್ದೆವು.

ನಾಳೆ ತಾನೇ ಪೊಲೀಸರಿಗೆ ಶರಣಾಗುತ್ತೇನೆ' ಎಂದು ಅಜ್ಞಾತ ಸ್ಥಳದಿಂದ ವಿಡಿಯೋ ಬಿಡುಗಡೆ ಮಾಡಿದ್ದ. ಆದರೆ ಕ್ಷಿಪ್ರ ಕಾರ್ಯಾಚರಣೆ ನಡೆಸಿದ ಕಮರ್ಷಿಯಲ್ ಸ್ಟ್ರೀಟ್ ಠಾಣೆ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಅಕ್ರಮ ಒತ್ತುವರಿ ತೆರವು ಕಾರ್ಯಾಚರಣೆಗೆ ಮಂಗಳವಾರ ಬೆಳಗ್ಗೆ ಶಿವಾಜಿನಗರದಲ್ಲಿ ಜಿಬಿಎ ವತಿಯಿಂದ ನಡೆದ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ವೇಳೆ ಪಾಲಿಕೆ ಸಿಬ್ಬಂದಿ ಮತ್ತು ಪೊಲೀಸರೊಂದಿಗೆ ಸ್ಥಳೀಯ ಸಂಘಟನೆಗಳ ಸದಸ್ಯರು ಮಾತಿನ ಚಕಮಕಿ ನಡೆಸಿದ್ದರು.

## ಅರ್ಚಕರ ಬೇಡಿಕೆ ಈಡೇರಿಕೆಗೆ ಸಿಎಂಗೆ ಮನವಿ



• ಉದಯವಾಹಿನಿ, ಬೆಂಗಳೂರು2

ರಾಜ್ಯ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಬರುವ 'ಸಿ' ವರ್ಗದ ದೇವಸ್ಥಾನಗಳ ಪೂಜಾ ಕಾರ್ಯಗಳ ಮಂಗಳ ದ್ರವ್ಯಕ್ಕಾಗಿ ಪ್ರತಿ ತಿಂಗಳು 5 ಸಾವಿರ ರೂ. ಮಂಜೂರು ಮಾಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರಿಗೆ ಅಖಿಲ ಕರ್ನಾಟಕ ಹಿಂದೂ ದೇವಾಲಯಗಳ ಅರ್ಚಕರ, ಆಗಮಿಕರ ಮತ್ತು ಉಪಾಧಿವಂತರ ಒಕ್ಕೂಟದ ರಾಜ್ಯಾಧ್ಯಕ್ಷ ದಿನೇಶ್ ಗುಂಡೂರಾವ್, ಅಧ್ಯಕ್ಷ ಡಾ. ಕೆ.ಇ. ರಾಧಾಕೃಷ್ಣ ಹಾಗೂ ಮುಖ್ಯ ಪ್ರಧಾನ ಕಾರ್ಯದರ್ಶಿ ಕೆ.ಎಸ್. ಎನ್. ದೀಕ್ಷಿತ್ ಮತ್ತು ಪದಾಧಿಕಾರಿಗಳು ಮನವಿ ಸಲ್ಲಿಸಿದ್ದಾರೆ.

ರಾಜ್ಯದಲ್ಲಿ ಎ.ಬಿ. ಮತ್ತು ಸಿ. ವರ್ಗದ ಸುಮಾರು 36,372 ದೇವಾಲಯಗಳು ಇದ್ದು, 'ಸಿ' ವರ್ಗದ ದೇವಸ್ಥಾನಗಳು ಹೆಚ್ಚಾಗಿ ಗ್ರಾಮೀಣ ಪ್ರದೇಶಗಳಲ್ಲಿ ಮತ್ತು ನಗರಗಳ ಹಳೆಯ ಪ್ರದೇಶಗಳಲ್ಲಿ ಧಾರ್ಮಿಕ ಕಾರ್ಯಗಳನ್ನು ನೆರವೇರಿಸುತ್ತಿವೆ.

ಈ ಪೈಕಿ ಅನೇಕ ದೇವಾಲಯಗಳು 200 ವರ್ಷಗಳಿಂದ 500 ವರ್ಷಗಳ ಹಳೆಯ ಮತ್ತು ಐತಿಹಾಸಿಕ ಮಹತ್ವವುಳ್ಳ ದೇವಾಲಯಗಳಾಗಿವೆ. ಮುಜರಾಯಿ ಇಲಾಖೆಯ ಸುಪರ್ದಿಯಲ್ಲಿರುವ ಅನೇಕ ದೇವಸ್ಥಾನಗಳಿಗೆ ಸೇರಿದ ಸಾವಿರಾರು ಎಕರೆ ಜಮೀನು ಮತ್ತು ನಗರಗಳ ಬೆಲೆಬಾಳುವ ಸ್ಥಳಗಳಲ್ಲಿರುವ ವಾಣಿಜ್ಯ ಕಟ್ಟಡಗಳು, ಅನಧಿಕೃತವಾಗಿ, ಕೆಲವರಿಂದ ಆಕ್ರಮಿಸಲ್ಪಟ್ಟಿದೆ. ಈ ನಿಟ್ಟಿನಲ್ಲಿ ರಾಮಲಿಂಗಾರೆಡ್ಡಿಯವರು ಮುಜರಾಯಿ ಸಚಿವರಾಗಿದ್ದ ಸಂದರ್ಭದಲ್ಲಿ 10,000 ಎಕರೆಯಷ್ಟು ಭೂಮಿಯನ್ನು ಸರ್ಕಾರ ವಶಪಡಿಸಿಕೊಂಡಿದೆ.

ಮತ್ತು ನಗರಗಳ ಹಳೆಯ ಪ್ರದೇಶಗಳಲ್ಲಿ ಧಾರ್ಮಿಕ ಈ ಜಮೀನುಗಳನ್ನು ಸದುಪಯೋಗ ಪಡಿಸಿದರೆ, ನಮ್ಮ ರಾಜ್ಯದ ಎಲ್ಲಾ ದೇವಸ್ಥಾನಗಳು ಸಂಪದ್ಭರಿತವಾಗುತ್ತವೆ. ಈ ನಿಟ್ಟಿನಲ್ಲಿ ಹಿಂದಿ ಮುಜರಾಯಿ ಇಲಾಖೆಯ ಕಾರ್ಯದರ್ಶಿಗಳಾಗಿದ್ದ ಎ. ರಾಮಸ್ವಾಮಿ ಐ.ಎ.ಎಸ್. ಇವರು ತಯಾರಿಸಿದ ವರದಿಯನ್ನು ಅನುಷ್ಠಾನಕ್ಕೆ ತರಬೇಕೆಂದು ಮನವಿ ಮಾಡಿದ್ದಾರೆ.

> ಗ್ರಾಮದೇವತೆಯ ದೇವಸ್ಥಾನಗಳಲ್ಲಿನ ಅರ್ಚಕರಲ್ಲಿ ಬಹುತೇಕರು ದಲಿತ ಮತ್ತು ಅತಿ ಹಿಂದುಳಿದ ವರ್ಗಗಳಿಗೆ ಸೇರಿದವರಾಗಿದ್ದು, ಇವರ ಸಂಖ್ಯೆಯೇ ಸುಮಾರು 20 ಸಾವಿರ ಮಂದಿ ಇದ್ದಾರೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.ಕೆ.ಎಸ್.ಎನ್. ದೀಕ್ಷಿತ್

# ಆರ್ಟ್ ಆಫ್ ಲಿವಿಂಗ್‌ನ ಭೂ ಅತಿಕ್ರಮಣ ತನಿಖೆಗೆ ಕರ್ನಾಟಕ ಸರ್ಕಾರ ಎಸ್ಐಟಿ ರಚನೆ

## ಕಂದಾಯ ಇಲಾಖೆ ಹೊರಡಿಸಿದ ಜುಲೈ 17 ರ ಆದೇಶವನ್ನು ಮಂಗಳವಾರ ಕಂದಾಯ ಸಚಿವರ ಕಚೇರಿ ಹಂಚಿಕೊಂಡಿದೆ.

• ಉದಯವಾಹಿನಿ, ಬೆಂಗಳೂರು

ದಕ್ಷಿಣ ತಾಲ್ಲೂಕಿನ ಕಗ್ಗಲಿಪುರ ಗ್ರಾಮದಲ್ಲಿ ಶ್ರೀ ಶ್ರೀ ರವಿಶಂಕರ್ ಅವರ ದಿ ಆರ್ಟ್ ಆಫ್ ಲಿವಿಂಗ್, ಅದರ ಅಂಗಸಂಸ್ಥೆಗಳು ಮತ್ತು ಇತರರು ಸರ್ಕಾರಿ ಭೂಮಿಯನ್ನು ಅತಿಕ್ರಮಣ ಮಾಡಿದ್ದಾರೆ ಎಂಬ ಆರೋಪದ ಬಗ್ಗೆ ಸಮಗ್ರ ತನಿಖೆ ನಡೆಸಲು ಕರ್ನಾಟಕ ಸರ್ಕಾರ ಎಸ್ಐಟಿಯನ್ನು ರಚಿಸಿದ್ದು, ಮೂರು ತಿಂಗಳೊಳಗೆ ತನ್ನ ವರದಿಯನ್ನು ಸಲ್ಲಿಸುವಂತೆ ಸಮಿತಿಗೆ ಸೂಚಿಸಿದೆ.

ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಮತ್ತು ಕರ್ನಾಟಕ ಭೂ ಕಬಳಿಕೆ ನಿಷೇಧ ಕಾಯ್ದೆ, 2011ರ ಅಡಿಯಲ್ಲಿ ಕಂದಾಯ ಇಲಾಖೆ ಹೊರಡಿಸಿದ ಜುಲೈ 17 ರ ಆದೇಶವನ್ನು ಕಂದಾಯ ಸಚಿವರ ಕಚೇರಿ ಹಂಚಿಕೊಂಡಿದೆ.

ಪ್ರಾದೇಶಿಕ ಆಯುಕ್ತ ಅಮಾನ್ ಆದಿತ್ಯ ಬಿಸ್ವಾಸ್ ನೇತೃತ್ವದ ವಿಶೇಷ ತನಿಖಾ ತಂಡ (ಎಸ್ಐಟಿ) ಹಿರಿಯ ಕಂದಾಯ ಅಧಿಕಾರಿಗಳು, ಭೂ ದಾಖಲೆ ಅಧಿಕಾರಿಗಳು, ಮೊಕದ್ದಮೆ ನಿರ್ವಹಣಾ ಸಲಹೆಗಾರರಾಗಿ ಸೇವೆ ಸಲ್ಲಿಸುತ್ತಿರುವ ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಮತ್ತು ಇತರ ಅಧಿಕಾರಿಗಳನ್ನು ಒಳಗೊಂಡಿದೆ. ಯಲಹಂಕದ ತಹಶೀಲ್ದಾರ್ ಕಲಿಮುಲ್ಲಾ ಅವರನ್ನು ಸದಸ್ಯ-ಕಾರ್ಯದರ್ಶಿಯಾಗಿ ನೇಮಿಸಲಾಗಿದೆ. ಸರ್ಕಾರಿ ಮತ್ತು ಸಾಂಸ್ಥಿಕ ದಾಖಲೆಗಳನ್ನು ಪರಿಶೀಲಿಸುವುದು, ಭೂ ಮಂಜೂರಾತಿ ದಾಖಲೆಗಳನ್ನು ಪರಿಶೀಲಿಸುವುದು, ಮೂಲ ಮಂಜೂರಾತಿದಾರರು ಮತ್ತು ಕಾನೂನುಬದ್ಧ ಉತ್ತರಾಧಿಕಾರಿಗಳನ್ನು ಗುರುತಿಸುವುದು, ನಕಲಿ ಅಥವಾ ಮೋಸದ ದಾಖಲೆಗಳನ್ನು ಪತ್ತೆಹಚ್ಚುವುದು, ಬಾಕಿ ಇರುವ ನ್ಯಾಯಾಲಯದ ಪ್ರಕರಣಗಳನ್ನು ಪರಿಶೀಲಿಸುವುದು, ಉಪಗ್ರಹ ಚಿತ್ರಗಳ ಮೂಲಕ ಪರಿಸರ ಹಾನಿಯನ್ನು ನಿರ್ಣಯಿಸುವುದು, ಸಾರ್ವಜನಿಕ ಸ್ಥಳಗಳು ಮತ್ತು ಜಲಮೂಲಗಳ ಸಮೀಕ್ಷೆ ಮಾಡುವುದು, ಪ್ರತಿವಾದಿಗಳಿಗೆ ಸಮನ್ಸ್ ಜಾರಿ ಮಾಡುವುದು, ಆಪಾದಿತ ಅತಿಕ್ರಮಣಗಳ ಸತ್ಯಾಸತ್ಯತೆಯನ್ನು ನಿರ್ಧರಿಸುವುದು ಮತ್ತು ಸರ್ಕಾರಿ ಮತ್ತು ಸಾರ್ವಜನಿಕ ಉಪಯುಕ್ತತೆಯ ಭೂಮಿಯನ್ನು ರಕ್ಷಿಸಲು ಕಾನೂನು ಮತ್ತು ಆಡಳಿತಾತ್ಮಕ ಕ್ರಮಗಳನ್ನು ಶಿಫಾರಸು ಮಾಡುವುದು ಎಸ್ಐಟಿಯ ಕಾರ್ಯವಾಗಿದೆ. ಅಕ್ಟೋಬರ್ 2025 ರಲ್ಲಿ ಭೂ ದಾಖಲೆಗಳ ಸಹಾಯಕ ನಿರ್ದೇಶಕರು ನಡೆಸಿದ ಸಮೀಕ್ಷೆಯಲ್ಲಿ ಆರ್ಟ್ ಆಫ್ ಲಿವಿಂಗ್‌ನ ಟ್ರಸ್ಟಿಗಳು ಮತ್ತು ಇತರ ಕೆಲವು ವ್ಯಕ್ತಿಗಳು ಸರ್ಕಾರಿ ಗುತ್ತಿಗೆ ಒಪ್ಪಂದಗಳು ಮತ್ತು ಭೂ ಮಂಜೂರಾತಿದಾರರೊಂದಿಗೆ ವ್ಯವಸ್ಥೆಗಳ ಮೂಲಕ, ಅನುಮಾನಾಸ್ಪದ ಅನುದಾನ ದಾಖಲೆಗಳು ಸೇರಿದಂತೆ, 290 ಎಕರೆಗಳಿಗೂ ಹೆಚ್ಚು ಸರ್ಕಾರಿ ಗೋಮಾಳ ಭೂಮಿಯನ್ನು ವ್ಯವಸ್ಥಿತವಾಗಿ, ನೇರವಾಗಿ ಮತ್ತು ಪರೋಕ್ಷವಾಗಿ ಅತಿಕ್ರಮಣ ಮಾಡಿದ್ದಾರೆ ಎಂದು ಪ್ರಾಥಮಿಕವಾಗಿ ತಿಳಿದುಬಂದಿದೆ ಎಂದು ಅದು ಹೇಳಿದೆ.

☛ ಉದಯವಾಹಿನಿ ಚಿತ್ರ



> ವೇದ ವಿಜ್ಞಾನ ಮಹಾ ವಿದ್ಯಾಪೀಠ ಸಂಸ್ಥೆ, ಸುಮೇರು ಗ್ಲೋಬಲ್ ಸಪೋರ್ಟ್ ಸೊಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್, ಸುಮೇರು ರಿಯಾಲ್ಟಿ ಪ್ರೈವೇಟ್ ಲಿಮಿಟೆಡ್, ರಿಟ್ ಅರ್ಜಿಯಲ್ಲಿ ಇತರ ಪ್ರತಿವಾದಿಗಳು ಮತ್ತು ಸರ್ಕಾರಿ ಭೂಮಿಯನ್ನು ಹೊಂದಿರುವ ಇತರ ವ್ಯಕ್ತಿಗಳು ಅಥವಾ ಸಂಸ್ಥೆಗಳು ಸೇರಿವೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. -ಅಮಾನ್ ಆದಿತ್ಯ ಬಿಸ್ವಾಸ್

### ಹೈಕೋರ್ಟ್‌ನ ನಿರ್ದೇಶನ

ಆದೇಶದ ಪ್ರಕಾರ, ಕರ್ನಾಟಕ ಹೈಕೋರ್ಟ್‌ನ ನಿರ್ದೇಶನಗಳನ್ನು ಅನುಸರಿಸಿ ಸಮೀಕ್ಷೆಯನ್ನು ನಡೆಸಲಾಯಿತು ಮತ್ತು ಆಕ್ರಮಿಸಿಕೊಂಡಿದೆ ಎಂದು ಹೇಳಲಾದ ಭೂಮಿಯನ್ನು ಮೂಲತಃ ನೀಡಲಾದ ಉದ್ದೇಶಕ್ಕಾಗಿ ಬಳಸಲಾಗುತ್ತಿಲ್ಲ ಎಂಬುದನ್ನು ಕಂಡುಹಿಡಿದಿದೆ.

# ಜಲಾಶಯ ಭರ್ತಿಯಾದರೆ ಮಾತ್ರ ಮುಂಗಾರಿಗೆ ನೀರು: ಸಚಿವ ರಾಮಲಿಂಗಾರೆಡ್ಡಿ

**ಈ ನಡುವೆ ಮಹಾರಾಷ್ಟ್ರದ ಮಳೆಯತ್ತ ಎಲ್ಲರ ಚಿತ್ತ ನೆಟ್ಟಿದ್ದು, ಅಲ್ಲಿ ಮಳೆಯಾದರೆ ಜಲಾಶಯಕ್ಕೆ ಒಳಹರಿವು ಆಗಬಹುದು**


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಕೊಡೇಕಲ್:**

ಆಲಮಟ್ಟಿ ಮತ್ತು ನಾರಾಯಣಪುರ ಅವಳಿ ಜಲಾಶಯಗಳಲ್ಲಿ ಸದ್ಯ 86 ಟಿಎಂಸಿ ನೀರು ಸಂಗ್ರಹವಿದ್ದು, ಇದರಲ್ಲಿ ಕುಡಿಯುವ ನೀರಿಗೆ ಮೊದಲ ಆದ್ಯತೆಯನ್ನು ನೀಡಲಾಗಿದ್ದು, ಈ ಹಿನ್ನೆಲೆಯಲ್ಲಿ ಎರಡು ಜಲಾಶಯಗಳು ಭರ್ತಿಯಾದರೆ ಮಾತ್ರ ರೈತರು ಬೆಳಗಳಿಗೆ ನೀರು ಹರಿಸಲಾಗುವುದು ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

**1 : 175 ತಾಲ್ಲೂಕುಗಳಲ್ಲಿ ಬರ**
**2 : ಒಂದು ಬೆಳೆಗೆ 67 ಟಿಎಂಸಿ**
**3 : ಕೃಷಿಗಾಗಿ ಕೇವಲ 10 ಟಿಎಂಸಿ**

ನಾರಾಯಣಪುರ ಬಸವಸಾಗರ ಜಲಾಶಯಕ್ಕೆ ಭೇಟಿ ನೀಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಪ್ರಸಕ್ತ ವರ್ಷ ಮುಂಗಾರು ವಿಫಲವಾಗಿರುವ ಕಾರಣದಿಂದಾಗಿ ಆಲಮಟ್ಟಿ ಮತ್ತು ನಾರಾಯಣಪುರ ಅವಳಿ ಜಲಾಶಯಗಳಲ್ಲಿ ಕೂಡಾ ನಿರೀಕ್ಷಿತ ಪ್ರಮಾಣದಲ್ಲಿ ನೀರಿನ ಸಂಗ್ರಹವಿಲ್ಲದಂತಾಗಿದ್ದು, ಸದ್ಯ ಅವಳಿ ಜಲಾಶಯಗಳಲ್ಲಿ ಕೇವಲ 86ಟಿಎಂಸಿ ನೀರು ಇದ್ದು, ಇದರಲ್ಲಿ ಕುಡಿಯುವ ನೀರಿಗಾಗಿ ಮೊದಲ ಆದ್ಯತೆ ಮತ್ತು ಥರ್ಮಲ್ ವಿದ್ಯುತ್ ಸ್ಥಾವರ ಹಾಗೂ ಕೆರೆ ತುಂಬುವ ಯೋಜನೆಗಳಿಗೆ ನೀರು ಹರಿಸಬೇಕಿದೆ.

ಇದಕ್ಕೂ ಪೂರ್ವದಲ್ಲಿ ಜಲಾಶಯಕ್ಕೆ ಆಗಮಿಸಿದ ಸಚಿವರನ್ನು ಶಾಸಕರು ಮತ್ತು ಕೃಷ್ಣಾ ಭಾಗ್ಯ ಜಲನಿಗಮದ ಎಂಡಿ ಸೇರಿ ಅಧಿಕಾರಿಗಳು ಸ್ವಾಗತ ನೀಡಿ ಬರಮಾಡಿಕೊಂಡರು, ಭೇಟಿಯ ನೆನಪಿಗಾಗಿ ಜಲಾಶಯದ ಆವರಣದಲ್ಲಿ ಸಸಿಯನ್ನು ನೆಡಲಾಯಿತು.

> ಈಗಾಗಲೆ ಆಲಮಟ್ಟಿ ಜಲಾಶಯಕ್ಕೆ 46 ಸಾವಿರ ಕ್ಯೂಸೆಕ್ ನೀರಿನ ಒಳಹರಿವು ಬರುತ್ತಿದ್ದು, ದಿನಕ್ಕೆ 3 ರಿಂದ 4 ಟಿಎಂಸಿ ನೀರಿನ ಒಳಹರಿವು ಬರುತ್ತಿದ್ದು, ಇದೇ ರೀತಿಯ ಒಳ ಹರಿವು ಮುಂದುವರಿದರೆ ಜಲಾಶಯ ಭರ್ತಿಯಾಗಿ ನಾರಾಯಣಪುರ ಜಲಾಶಯಕ್ಕೂ ನೀರು ಹರಿಸಬಹುದಾಗಿದ್ದು, ವೇಳೆ ರೈತರು ಜಮೀನುಗಳಿಗೆ ನೀರು ಹರಿಸಬಹುದಾಗಿದೆ ಎಂದು ಹೇಳಿದರು. -ಸಚಿವ ರಾಮಲಿಂಗಾರೆಡ್ಡಿ

> ಹೀಗಾಗಿ ಕೃಷಿಗಾಗಿ ಕೇವಲ 10 ಟಿಎಂಸಿ ನೀರು ಮಾತ್ರ ಉಳಿಯುತ್ತದೆ. ಒಂದು ಬೆಳೆಗೆ 67 ಟಿಎಂಸಿ ನೀರಿನ ಅವಶ್ಯತೆಯಿರುವ ಕಾರಣದಿಂದಾಗಿ ಮುಂಗಾರು ಬೆಳೆಗಳಿಗೆ ನೀರು ಸಿಗುವ ಸಾಧ್ಯತೆ ಕಡಿಮೆಯಾಗಿದೆ ಎಂದರು. -ಸಚಿವ ರಾಮಲಿಂಗಾರೆಡ್ಡಿ

ನಂತರ ಜಲಾಶಯಕ್ಕೆ ಹರಿದು ಬರುತ್ತಿರುವ ನೀರಿನ ಒಳಹರಿವು ಮತ್ತು ಹೊರ ಹರಿವಿನ ಕುರಿತಂತೆ ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದುಕೊಂಡು ಮುಖ್ಯ ಕ್ರಸ್ಟ್ ಗೇಟ್‌ಗಳನ್ನು ಕಾರ್ಯ ವೀಕ್ಷಣೆಯನ್ನು ಮಾಡಿದರು. ನಂತರ ಬೂದಿಹಾಳ ಪೀರಾಪುರ ಕಾಮಗಾರಿ ನಡೆಯುವ ಸ್ಥಳಕ್ಕೆ ಭೇಟಿ ನೀಡಿದ ಸಚಿವರು ಬಳಿಕ ಸ್ಕಾಡಾ ರೂಮ್‌ಗೆ ತೆರಳಿ ಅಲ್ಲಿ ನಿಗಮದ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡು ಟಿವಿ ಪರದೆ ಮೂಲಕ ಸ್ಕಾಡಾ ತಂತ್ರಜ್ಞಾನದ ಮೂಲಕ ಕಾಲುವೆಗಳಿಗೆ ನೀರು ಹರಿಸುವ ವಿಧಾನವನ್ನು ನೋಡಿದರು.

> ಈಗಾಗಲೇ ರಾಜ್ಯದಲ್ಲಿ ಮಳೆ ಆಗದ ಕಾರಣ ಬರದ ಛಾಯೆ ಆವರಿಸಿದ್ದು, ರಾಜ್ಯದ 175 ತಾಲೂಕುಗಳನ್ನು ಬರ ಪೀಡಿತ ಎಂದು ಮುಖ್ಯಮಂತ್ರಿಗಳು ಘೋಷಣೆ ಮಾಡಲಿದ್ದಾರೆ. ಒಂದು ವೇಳೆ ಮಹಾರಾಷ್ಟ್ರದಲ್ಲಿ ಮತ್ತೆ ಮಳೆ ಹೆಚ್ಚಾದರೆ ಆಲಮಟ್ಟಿ ಜಲಾಶಯಕ್ಕೆ ನೀರಿನ ಒಳಹರಿವು ಹೆಚ್ಚಾಗಲಿದೆ.

# ಶಂಕರಾಚಾರ್ಯರ ಬಗ್ಗೆ ಅವಹೇಳನ ಹೇಳಿಕೆ ಖಂಡಿಸಿ ಪ್ರತಿಭಟನೆ

• **ಉದಯವಾಹಿನಿ, ಚಿತ್ರದುರ್ಗ:**

ಆದಿ ಗುರು ಶಂಕರಾಚಾರ್ಯರ ಬಗ್ಗೆ ಅವಹೇಳನವಾಗಿ ಮಾತನಾಡಿ, ಅನಗತ್ಯ ವಿವಾದ ಉಂಟು ಮಾಡಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಚಿತ್ರದುರ್ಗ ಬ್ರಾಹ್ಮಣ ಸಂಘ ಹಾಗೂ ಶಂಕರ ತತ್ವ ಅಭಿಯಾನ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿ, ಕಚೇರಿ ಸಹಾಯಕರ ಮೂಲಕ ರಾಜ್ಯಪಾಲರು ಹಾಗೂ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.ಸಾಮಾಜಿಕ ಜಾಲತಾಣಗಳಲ್ಲಿಯೂ ಹರಿದಾಡಿರುವುದು ಹಿಂದೂ ಬಾಂಧವರ ಮತ್ತು ಸನಾನತ ಧರ್ಮದ ಸಂಸ್ಥಾಪಕ ಶ್ರೀಮದ್ ಜಗದ್ಗುರು ಶಂಕರಾಚಾರ್ಯರ ಅನುಯಾಯಿಗಳ ಶ್ರದ್ಧಾ, ಭಕ್ತಿ, ನಂಬಿಕೆಗೆ ತೀವ್ರ ಆಘಾತವನ್ನುಂಟು ಮಾಡಿದೆ.

ದೈವಾಂಶ ಸಂಭೂತರಾದ ಆಚಾರ್ಯತ್ರಯರು ಸಮಾಜದಲ್ಲಿ ಪರಸ್ಪರ ಸಾಮರಸ್ಯ ಮೂಡಿಸಿದ್ದಾರೆ. ಅವರು ಪ್ರತಿಪಾದಿಸಿದ ಅದ್ವೈತ ತತ್ವವು ಕಲ್ಪಿತವಾದುದಲ್ಲ. ವೇದಶಾಸ್ತ್ರ ಪುರಾಣಗಳಲ್ಲಿ ಪ್ರತಿಪಾದಿತವಾದ ಅದ್ವೈತತತ್ವವನ್ನೇ ಪರಮ ಕಾರುಣ್ಯದಿಂದ ನಮಗೆ ತಿಳಿಸಿಕೊಟ್ಟಿದ್ದಾರೆ. ಅಂತಹ ಮಹಾತ್ಮರಿಗೆ ಆಗಿರುವ ನಿಂದನೆ ಧರ್ಮಾಭಿಮಾನಿಗಳ ಭಕ್ತಿಗೆ ಧಕ್ಕೆಯುಂಟಾಗಿದೆ. ಇಂತಹ ಘಟನೆಗಳು ಇನ್ನು ಮುಂದೆ ಮರುಕಳಿಸಬಾರದು ಎಂದು ಬ್ರಾಹ್ಮಣ ಸಂಘದವರು ಒತ್ತಾಯಿಸಿದರು.ಪ್ರತಿಭಟನೆಯಲ್ಲಿ ಚಿತ್ರದುರ್ಗ ಬ್ರಾಹ್ಮಣ ಸಂಘದ ಕಾರ್ಯದರ್ಶಿ ಡಿ.ಜಿ.ಪ್ರಾಣೇಶ್‌ರಾವ್, ನಿರ್ದೇಶಕರಾದ ಕೆ.ಹೆಚ್.ಶಂಕರ್, ದಿವಾಕರ್, ರಾಘವೇಂದ್ರ, ಅಧ್ಯಕ್ಷ ಸ್ವಾಮಿನಾಥ್ ಇತರರು ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

## ಮಿನಿ ನ್ಯೂಸ್

### ಸಿ ಎಂ ಡಿ.ಕೆ.ಶಿವಕುಮಾರ್ ಪ್ರವಾಸ ವೇಳೆ ಕರ್ತವ್ಯಲೋಪ: ಡಿಎಚ್‌ಒಗೆ ನೋಟಿಸ್


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಳಗಾವಿ:**

ನಗರದಲ್ಲಿ ಜುಲೈ 9, 10ರಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೈಗೊಂಡಿದ್ದ ಪ್ರವಾಸದ ವೇಳೆ, ಅಡ್ವಾನ್ಸಡ್ ಆಂಬುಲೆನ್ಸ್ ಒದಗಿಸದೆ ಮತ್ತು ತಜ್ಞವೈದ್ಯರನ್ನು ನೇಮಿಸದೆ ಶಿಷ್ಟಾಚಾರ ಉಲ್ಲಂಘಿಸಿದ ಆರೋಪದಡಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಐ.ಪಿ.ಗಡಾದ ಅವರಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅವರು ಕಾರಣ ಕೇಳಿ ನೋಟಿಸ್ ಜಾರಿಗೊಳಿಸಿದ್ದಾರೆ.

‘ಸರ್ಕಾರದ ನಿರ್ದೇಶನವಿದ್ದರೂ, ಲೈಫ್‌ಸಪೋರ್ಟ್ ಆಂಬುಲೆನ್ಸ್ ಒದಗಿಸಿಲ್ಲ. ವೈದ್ಯಕೀಯ ತಂಡದೊಂದಿಗೆ ನಿರಂತರ ಸಂಪರ್ಕ ಸಾಧಿಸದೆ ನಿರ್ಲಕ್ಷ್ಯ ವಹಿಸಿದ್ದೀರಿ. ಸಿ.ಎಂ ತಂಗಿದ್ದ ಸ್ಥಳದಲ್ಲಿ ತಜ್ಞವೈದ್ಯರ ಬದಲಿಗೆ, ಪಿ.ಜಿ ವೈದ್ಯರನ್ನು ನಿಯೋಜಿಸಿದ್ದೀರಿ. ಪರಿಶೀಲನೆ ವೇಳೆ, ನೀವು ಮತ್ತು ವೈದ್ಯರು ಹಾಜರಿರದೆ ಇರುವುದು ಗಮನಕ್ಕೆ ಬಂದಿದೆ. ಹಾಗಾಗಿ ನಿಮ್ಮ ಮೇಲೆ ಏಕೆ ಶಿಸ್ತು ಕ್ರಮ ಕೈಗೊಳ್ಳಬಾರದು’ ಎಂದು ನೋಟಿಸ್‌ನಲ್ಲಿ ತಿಳಿಸಲಾಗಿದೆ.

# ಬರಪೀಡಿತ ಪ್ರದೇಶ ಘೋಷಿಸಿ ಏಕರೆ 25ಸಾವಿರ.ರೂ.ಪರಿಹಾರಕ್ಕೆ ಆಗ್ರಹಿಸಿ,ರೈತ ಸಂಘದಿಂದ ಕುರಿ,ಎತ್ತುಬಂಡಿಗಳ ಮೂಲಕ ಬೃಹತ್ ಪ್ರತಿಭಟನೆ

• **ಉದಯವಾಹಿನಿ,ಚಿಂಚೋಳಿ**

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ರಾಜ್ಯ,ರಾಷ್ಟ್ರೀಯ ಹೆದ್ದಾರಿ ತಡೆದು ರೈತ ದಲಿತ ಹಿಂದುಳಿದ ಕನ್ನಡಪರ ವಿವಿಧ ಸಂಘಟನೆಗಳ ಒಕ್ಕೂಟದಿಂದ ಮಳೆ ಇಲ್ಲದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಹಾಗಾಗಿ ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರ ಪ್ರತಿ ಏಕರೆ 25ಸಾವಿರ ರೂ.ಪರಿಹಾರಧನ ನೀಡಬೇಕೆಂದು ಒತ್ತಾಯಿಸಿ ಕುರಿ,ಎತ್ತುಬಂಡಿಗಳ ಮೂಲಕ ಬೃಹತ್ ಪ್ರತಿಭಟನೆ ನಡೆಸಿ ಗ್ರೇಡ್2 ತಹಶೀಲ್ದಾರ್ ವೆಂಕಟೇಶ ದುಗ್ಗನ್ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿಪತ್ರ ಸಲ್ಲಿಸಿದರು.

ಪ್ರತಿಭಟನೆ ಉದ್ದೇಶಿಸಿ ರೈತ ಮುಖಂಡ ಶರಣಬಸಪ್ಪಾ ಮಮಶೆಟ್ಟಿ ಮಾತನಾಡಿ ಬರಪೀಡಿತ ಪ್ರದೇಶವೆಂದು ಘೋಷಿಸಿ ಹಿಂಗಾರು ಬಿತ್ತನೆಗೆ ಬೀಜ ರಸಗೊಬ್ಬರ ಉಚಿತವಾಗಿ ವಿತರಿಸಬೇಕು,ರಾಷ್ಟ್ರೀಕೃತ ಬ್ಯಾಂಕಗಳ ಸಾಲ ಮರುಪಾವತಿಗೆ ಕಾಲಾವಕಾಶ ವಿಸ್ತರಿಸಬೇಕು,ರೈತರ ಕಬ್ಬು ಒಣಗುತ್ತಿದ್ದು ಅಂತರ ಜಲಮಟ್ಟ ಕುಸಿಯುತ್ತಿದೆ,ಮಹಾರಾಷ್ಟ್ರ ಪುಣೆಯ ಉಜನಿ ಜಲಾಶಯದಿಂದ ಕರ್ನಾಟಕ ನೀರಿನ ಪಾಲು 15ಟಿಎಂಸಿ ನೀರು ಬಿಡಿಸಿ ಬತ್ತಿದ ಬೀಮಾ ನದಿ ತುಂಬಿಸಬೇಕು.


ಉದಯವಾಹಿನಿ ಚಿತ್ರ

ಗ್ರಾಮೀಣ ಪ್ರದೇಶದ ಜನರು ಗೂಳೆ ಹೋಗುತ್ತಿದ್ದು ಬರಗಾಲ ಘೋಷಿಸಿ ಬರಗಾಲ ಕಾಮಗಾರಿ ಪ್ರಾರಂಭಿಸಬೇಕು,ರಾಷ್ಟ್ರೀಕೃತ ಬ್ಯಾಂಕಗಳ ಸಾಲಮನ್ನಾ ಮಾಡಬೇಕು,ಉದ್ದು,ಹೆಸರು ಬೆಳೆಗಳು ಸಂಪೂರ್ಣ ನಾಶವಾಗಿದ್ದು ಬರಗಾಲ ವಿಮೆ ಜಾರಿ ಮಾಡಬೇಕು,ಭೀಕರ ಬರಗಾಲದಿಂದ ತತ್ತರಿಸಿ ಒಣಗಿದ ಕಬ್ಬು ಬೆಳೆದ ರೈತರಿಗೆ ಪ್ರತಿ ಏಕರೆಗೆ 50ಸಾವಿರ ರೂ.ನೀಡಡೇಕು,ಸಾಲಭಾಧೆ ತಾಳಲಾರದೆ ಆತ್ಮಹತ್ಯೆ ಮಾಡಿಕೊಂಡ ರೈತರಿಗೆ ಸೂಕ್ತ ಪರಿಹಾರ ಧನ ನೀಡಬೇಕು,ಧನಕರುಗಳಿಗೆ ಮೇವು ಉಚಿತವಾಗಿ ನೀಡಿ ಗೋಶಾಲೆ ಪ್ರಾರಂಭಿಸಬೇಕು,ಕಲಬುರ್ಗಿ ಜಿಲ್ಲೆಯಲ್ಲಿ ವಿವಿಧೆಡೆ ಕುಡಿಯುವ ನೀರಿನ ಸಮಸ್ಯೆವಿದ್ದಲ್ಲಿ ಪರಿಹರಿಸಬೇಕು,ವಿಧವಾ ವೇತನ,ವೃಂದ್ಧಾಪ್ಯವೇತನ,ಅಂಗ ವಿಕಲ ಚೇತನ ಅರ್ಥಕ್ಕೆ ನಿಂತ್ತಿದ ಮಾಶಸನ ಹಣ ಬಿಡುಗಡೆ ಮಾಡಬೇಕು,ರಾಷ್ಟ್ರೀಕೃತ ಬ್ಯಾಂಕಗಳು ಸಾಲದ ದೃಡಿಕರಣ ಕಡ್ಡಾಯವಾಗಿ ಕೇಳುವುದು ವಿಮಾ ಕಂಪನಿಗಳು ಕೈ ಬೀಡಬೇಕು,ಎಲ್ ನಿನೋ ಭೀಕರ ಬರಗಾಲ ಛಾಯೇ ಆವರಿಸಿದೆ ಮೊಢ ಬಿತ್ತನೆ ಮಾಡಬೇಕು,ಬಾಕಿಯಿರುವ ಬೆಳೆ ವಿಮೆ ಬಿಡುಗಡೆ ಮಾಡಬೇಕು,ಬೆಳೆವಿಮೆ ಪರಿಹಾರ ತಕ್ಷಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಕೆಎಂ ಬಾರಿ,ಜೆಡಿಎಸ್ ಅಧ್ಯಕ್ಷ ರವಿಶಂಕರರೆಡ್ಡಿ ಮುತ್ತಂಗಿ,ವೀರಣ್ಣ ಗಂಗಾಣಿ,ಜಾಫರಖಾನ್ಮಾರುತಿ ಗಂಜಗೀರಿ,ಹಣಮಂತ ಪೂಜಾರಿ,ಕಾಶಿನಾಥ್ ಶಿಂಧೆ,ಒಮನರಾವ ಕೊರವಿ ಮಾತನಾಡಿದರು. ಈ ಸಂದರ್ಭದಲ್ಲಿ ಗೋಪಾಲ ಇಡಗೊಟ್ಟಿ, ವಿಠಲ ಕುಸಾಳೆ, ಮೋಹನ ಐನಾಪೂರ,ರೇವಣಸಿದ್ದಪ್ಪ ಚಿದ್ರಿ,ನಾರಾಯಣ,ಪ್ರಕಾಶ ಭಕ್ತಂಪಳ್ಳಿ,ರೇವಣಸಿದ್ದಪ್ಪಾ ಅಲ್ಲಾಪೂರ,ಮಂಜೂರ ಅಹೇಮದ್,ಎಸ್ಕೆ ಮೋಖ್ತಾರ್,ಗೋಪಾಲ ರಾಂಪೂರೆ,ಅಮರ ಲೋಡನೂರ,ಹೀರಾ ಪವ್ಹಾರ,ಅನೇಕರಿದ್ದರು.

### ಸರ್ವರ್ ಸಮಸ್ಯೆ: ಹೊನ್ನಾಳಿ ನಾಡಕಚೇರಿ ಎದುರು ರಾತ್ರಿಯೂ ಸರತಿ ಸಾಲು

• **ಉದಯವಾಹಿನಿ, ದಾವಣಗೆರೆ:**

ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನ ನಾಡಕಚೇರಿಯಲ್ಲಿ ಸರ್ವರ್ ಸಮಸ್ಯೆಯಿಂದ ಆನ್ಲೈನ್ ದಾಖಲೆಗಳನ್ನು ಪಡೆಯಲು ಜನರು ರಾತ್ರಿಯೂ ಸರತಿ ಸಾಲಿನಲ್ಲಿ ಕಾಯುತ್ತಿದ್ದಾರೆ.ಹೊನ್ನಾಳಿ ಹೊರವಲಯದ ಎಚ್. ಕಡದಕಟ್ಟೆ ಸಮೀಪದ ನಾಡಕಚೇರಿಯಲ್ಲಿ ಸರ್ವರ್ ಸಮಸ್ಯೆ ಉಂಟಾಗಿದೆ. ಇದರಿಂದ ಭೂದಾಖಲೆ, ಆದಾಯ ಹಾಗೂ ಜಾತಿ ಪ್ರಮಾಣ ಪತ್ರ ಪಡೆಯಲು ಜನರು ಪರದಾಡುವಂತಾಗಿದೆ.

ದಿನಕ್ಕೆ 25 ಜನರಿಗೆ ಮಾತ್ರ ದಾಖಲೆಗಳನ್ನು ವಿತರಿಸಲು ಸಾಧ್ಯವಾಗುತ್ತಿದೆ. ಇದರಿಂದ ಮಧ್ಯ ರಾತ್ರಿಯಿಂದಲೇ ಸರತಿ ಸಾಲು ಸೃಷ್ಟಿ ಆಗುತ್ತಿದೆ. ಬೇಗ್ಗೆ ಬಂದವರಿಗೆ ದಾಖಲೆಗಳನ್ನು ಪಡೆಯಲು ಸಾಧ್ಯ ಆಗುತ್ತಿಲ್ಲ, ಅಧಿಕಾರಿಗಳು ಸರ್ವರ್ ಸಮಸ್ಯೆಯ ನೆಪ ಹೇಳುತ್ತಿದ್ದಾರೆ ಎಂದು ಜನರು ಆಕ್ರೋಶ ವ್ಯಕ್ತಪಡಿಸಿದರು.

# ಪರಿಸರ ಉಳಿಸಿ ನಾಡು ಬೆಳೆಸಿ ಘೋಷಣೆಯೊಂದಿಗೆ ಟ್ರಸ್ಟ್‌ನಿಂದ ಕಾರ್ಯಕ್ರಮ

• **ಉದಯವಾಹಿನಿ ಕಾರಟಗಿ,**

ಬರಗಾಲದ ಕಾರ್ಮೋಡ ಕಾಡದಿರಲಿ ಎಂಬ ಆಶಯದೊಂದಿಗೆ ಡಾ. ನಾಗಲಕ್ಷ್ಮಿ ಚೌಧರಿ ಜೀವನಶ್ರೀ ಟ್ರಸ್ಟ್(ರಿ) ಕಾರಟಗಿ ವತಿಯಿಂದ ಕಾರಟಗಿ ಬಸ್ ನಿಲ್ದಾಣದಲ್ಲಿ ಬೃಹತ್ ಸಸಿ ವಿತರಣೆ ಮತ್ತು ಅನ್ನಸಂತರ್ಪಣೆ ಕಾರ್ಯಕ್ರಮ ನೆರವೇರಿಸಲಾಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಟ್ರಸ್ಟ್‌ನ ಅಧ್ಯಕ್ಷ ಭೀಮೇಶ್ ಕಕ್ಕರಗೋಳ ಅವರು, ಬರಗಾಲದ ಆತಂಕ ದೂರವಾಗಲಿ. ಮಳೆರಾಯನ ಕೃಪೆಯಿಂದ ನಾಡಿನಲ್ಲಿ ಸಮೃದ್ಧ ಮಳೆಯಾಗಿ ರೈತರ ಮುಖದಲ್ಲಿ ಮಂದಹಾಸ ಮೂಡಬೇಕು. ಜಲಕ್ಷಾಮದ ಸಮಸ್ಯೆ ಕಾಡದಿರಲಿ ಎಂಬುದು ಈ ಪ್ರಾರ್ಥನೆಯ ಮೂಲ ಉದ್ದೇಶ ಎಂದು ಹೇಳಿದರು.

**2001 ಸಸಿ ವಿತರಣೆ** :ಪರಿಸರ ಉಳಿಸಿ ನಾಡು ಬೆಳೆಸಿ ಎನ್ನುವ ಧ್ಯೇಯದೊಂದಿಗೆ ಕಾರ್ಯಕ್ರಮದಲ್ಲಿ ಒಟ್ಟು 2001 ಸಸಿಗಳನ್ನು ಸಾರ್ವಜನಿಕರಿಗೆ ವಿತರಿಸಲಾಯಿತು. ಕರ್ನಾಟಕದಲ್ಲಿ ಮಳೆ ಮತ್ತು ಬರ ಪರಿಸ್ಥಿತಿ ದೂರವಾಗಿ ಸಮೃದ್ಧ ಬೆಳೆ ಬರಲಿ ಎಂದು ಆಯೋಜಕರು ಪ್ರಾರ್ಥಿಸಿದರು.

ಇದರೊಂದಿಗೆ ಸುಮಾರು 500 ಜನರಿಗೆ ಅನ್ನಸಂತರ್ಪಣೆ ಸಹ ನೆರವೇರಿಸಲಾಯಿತು.



ಉದಯವಾಹಿನಿ ಚಿತ್ರ

ಗಣ್ಯರ ಉಪಸ್ಥಿತಿ :ಕಾರ್ಯಕ್ರಮದಲ್ಲಿ ಭೂ ನ್ಯಾಯಾಲಯ ಮಂಡಳಿಯ ಅಧ್ಯಕ್ಷರಾದ ತಿಮ್ಮನಗೌಡ ವಕೀಲರು, ಪ್ರದೀಪ್ ಪೂಜಾರಿ ಹಾಗೂ ಟ್ರಸ್ಟ್‌ನ ಎಲ್ಲ ಸರ್ವ ಸದಸ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲರಿಗೂ ಧನ್ಯವಾದ ತಿಳಿಸಿದ ಆಯೋಜಕರು, ಇದೇ ರೀತಿ ಮುಂದಿನ ದಿನಗಳಲ್ಲಿ ಹೆಚ್ಚಿನ ಸಮಾಜ ಸೇವೆ ಮಾಡುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸಿದರು.ಈ ಕಾರ್ಯಕ್ರಮವನ್ನು ಡಾ. ನಾಗಲಕ್ಷ್ಮಿ ಚೌಧರಿ ಜೀವನಶ್ರೀ ಟ್ರಸ್ಟ್(ರಿ) ಕಾರಟಗಿ ಆಯೋಜಿಸಿತ್ತು.

**ಆಯೋಜಕರು:** ಡಾ. ನಾಗಲಕ್ಷ್ಮಿ ಚೌಧರಿ ಜೀವನಶ್ರೀ ಟ್ರಸ್ಟ್(ರಿ), ಕಾರಟಗಿ
ಸ್ಥಳ: ಕಾರಟಗಿ ಬಸ್ ನಿಲ್ದಾಣ
ದಿನಾಂಕ: 21-07-2026

# ಆಡಂಬರದ ಜನ್ಮದಿನ ಆಚರಿಸಿಕೊಳ್ಳದೆ 68ಸಸಿಗಳು ನೆಟ್ಟು ಮಾದರಿ ಹುಟ್ಟುಹಬ್ಬ ಆಚರಣೆ

• **ಉದಯವಾಹಿನಿ,ಚಿಂಚೋಳಿ**

ಕೂಲಿ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ಭೀಮಶೇಟ್ಟಿ ಎಂಪಳ್ಳಿಯವರು ಆಡಂಬರದ ಜನ್ಮದಿನ ಆಚರಿಸಿಕೊಳ್ಳದೆ ಅವರ 68ನೇ ಜನ್ಮದಿನ ಅಂಗವಾಗಿ 68ಸಸಿಗಳು ನೆಟ್ಟು ಜನ್ಮದಿನ ಆಚರಿಸಿಕೊಂಡು ಇತರರಿಗೆ ಮಾದರಿಯಾದರು.

ಪಟ್ಟಣದ ಚಂದಾಪೂರದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಸತಿನಿಲಯದ ಆವರಣದಲ್ಲಿ ಭೀಮಶೇಟ್ಟಿ ಎಂಪಳ್ಳಿಯವರ 68ನೇ ಹುಟ್ಟುಹಬ್ಬದ ಅಂಗವಾಗಿ ಕಾರ್ಮಿಕರು ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,ಕೆಲವರು ಹುಟ್ಟುಹಬ್ಬದ ಅಂಗವಾಗಿ ಕೇಕ್ ಕತ್ತರಿಸಿ,ಪಾರ್ಟಿ ಕೊಡುವುದು ದುಂದುವೆಚ್ಚ ಮಾಡುವುದು ಬಿಡಬೇಕು.

ಪ್ರತಿಯೊಬ್ಬರು ಹುಟ್ಟುಹಬ್ಬದ ದಿನದಂದು ಸಸಿಗಳು ನೆಟ್ಟು ಪೋಷಣೆ ಮಾಡಿದರೆ ಸಮಯಕ್ಕೆ ಮಳೆ,ನೀರು ಬಿಸಿಲು ರೈತರ ಬೆಳೆಗಳು ಆಗುತ್ತವೆ,ದುಂದುವೆಚ್ಚ ಮಾಡಿ ಗಿಡಮರಗಳು ನಾಶ ಪಡಿಸುತ್ತಿರುವುದರಿಂದ ಸಮಯಕ್ಕೆ ಮಳೆ ಗಾಳಿ ಬರದೆ ರಾಜ್ಯದ ಜನರು ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಹಾಗಾಗಿ ನನಗೆ ಹುಟ್ಟುಹಬ್ಬದ ಶುಭಕೋರುವವರು ಪ್ರತಿಯೋಬ್ಬರು ಒಂದು ಸಸಿನೆಟ್ಟು ಶುಭಕೋರಬೇಕು ಇಲ್ಲಾಂದ್ರೆ, ಇಲ್ಲವೆಂದು ಭೀಮಶೇಟ್ಟಿ ಎಂಪಳ್ಳಿ ಹೇಳಿದರು.


ಉದಯವಾಹಿನಿ ಚಿತ್ರ

ರಾಜ್ಯಾದ್ಯಂತ ಎಲ್ಲಾ ವಸತಿನಿಲಯಗಳಲ್ಲಿ ಕೂಲಿ ಕಾರ್ಮಿಕರು ನನಗೆ ಹುಟ್ಟುಹಬ್ಬದ ಶುಭಕೋರಲು ಒಟ್ಟಾರೆ ಐದು ಸಾವಿರ ಸಸಿಗಳು ನೆಟ್ಟು ಶುಭಕೋರಿದ್ದಾರೆ,ರಾಜಕೀಯ ಮುಖಂಡರು ಸಹ ತಮ್ಮ ಹುಟ್ಟುಹಬ್ಬ ಅಂಗವಾಗಿ ಪ್ರತಿಯೊಬ್ಬರೂ ಸಸಿಗಳು ನೆಟ್ಟು ಪೋಷಿಸಬೇಕು ಎಂದರು. ಈ ಸಂದರ್ಭದಲ್ಲಿ ವಸತಿ ನಿಲಯ ಮೇಲ್ವಿಚಾರಕರು ವಿಜಯಲಕ್ಷ್ಮಿ,ದೀಪಾ,ರೇಷ್ಮಾ,ಹಾಗೂ ಪ್ರಭು ಪ್ಯಾರಬದ್ದಿ,ಸಂಜು ಮೇತ್ರಿ,ಮಹಾಂತೇಶ ದುಕಾನದಾರ್,ನರಸಮ್ಮ ಚಂದನಕೇರಾ,ಕಲ್ಪನಾ,ಗುರುಲಿಂಗಮ್ಮ,ಪ್ರಭಾವತಿ,ಸುವರ್ಣಾ,ಶಿಲ್ಪಾ,ಗುಂಡಮ್ಮ,ಗೋಧಾವರಿ,ರಾಜೇಶ್ವರಿ ಅನೇಕರಿದರು.

### ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ: ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ

• **ಉದಯವಾಹಿನಿ, ಕಲಬುರಗಿ:**

‘ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಗೆ ಕಾರಣರಾದ ಉನ್ನತ ಅಧಿಕಾರಿಗಳಿಗೆ ಗಂಭೀರ ಶಿಕ್ಷೆಯಾಗಬೇಕು. ಇದರ ನೈತಿಕ ಹೊಣೆಹೊತ್ತು ದೇಶದ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ರಾಜೀನಾಮೆ ನೀಡಬೇಕು’ ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಕ್ರಾಂತಿಕಾರಿ) ರಾಜ್ಯ ಸಂಚಾಲಕ ಅರ್ಜುನ ಭದ್ರೆ ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ‘ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿ ಸುಮಾರು 23 ಲಕ್ಷ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ದಾಳಿಯಾಗಿದೆ. ಎನ್‌ಟಿಎ ಸಂಸ್ಥೆ ವಿದ್ಯಾರ್ಥಿಗಳ ಜೊತೆ ಚೆಲ್ಲಾಟವಾಡುತ್ತಿರುವುದು ಹೊಸದೇನಲ್ಲ. 2024ರಲ್ಲಿಯೂ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿ ಪರೀಕ್ಷೆ ರದ್ದು ಮಾಡಲಾಗಿತ್ತು’ ಎಂದರು.

‘ಎನ್‌ಟಿಎ ಹಾಗೂ ಶಿಕ್ಷಣ ಸಚಿವರು ಯಾರೂ ಸಹ ಇದರ ಹೊಣೆಹೊರುತ್ತಿಲ್ಲ. ಇವರ ಅಧಿಕಾರದ ಹಪಾಹಪಿಗೆ ದೇಶದ ಬಡಜನರ ಮಕ್ಕಳು ಬಲಿಯಾಗುತ್ತಿದ್ದಾರೆ. ಕೋಟಾದಂತಹ ಜಾಗಗಳಲ್ಲಿ ನರಕಯಾತನೆ ಅನುಭವಿಸುತ್ತಿರುವ ಮಕ್ಕಳು ಮಾನಸಿಕ ಒತ್ತಡಕ್ಕೆ ಒಳಗಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಇದು ಆತ್ಮಹತ್ಯೆಯಲ್ಲ, ವ್ಯವಸ್ಥೆ ಹಾಗೂ ಸರ್ಕಾರ ಮಾಡುತ್ತಿರುವ ಸಾಂಸ್ಥಿಕ ಕೊಲೆಗಳು. ವಿದ್ಯಾರ್ಥಿಗಳ ಬದುಕು ಬೀದಿಗೆ ತಂದ ದೇಶದ ವೈದ್ಯಕೀಯ ಶಿಕ್ಷಣದ ಪಾವಿತ್ರ್ಯವನ್ನು ಮಣ್ಣುಪಾಲು ಮಾಡಿದ ಎನ್‌ಟಿಎ ರದ್ದುಗೊಳಿಸಬೇಕು’ ಎಂದು ಆಗ್ರಹಿಸಿದರು.

# ರಾಜ್ಯ -ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ ರೈತರಿಂದ ಬಹೃತ್ ಪ್ರತಿಭಟನೆ

• **ಉದಯವಾಹಿನಿ, ಹಾವೇರಿ:**

ಜಿಲ್ಲೆಯನ್ನು ಬರಗಾಲ ಪೀಡಿತವೆಂದು ಘೋಷಣೆ ಮಾಡಬೇಕು, ರೈತರ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು, ಪ್ರಸ್ತುತ ವರ್ಷ ಬೆಳೆ ವಿಮೆಯಲ್ಲಿನ ಗೊಂದಲಗಳ ನಿವಾರಣೆ ಮಾಡುವಂತೆ ಆಗ್ರಹಿಸಿ ನಗರದಲ್ಲಿ ಮಂಗಳವಾರ ಹಸಿರು ಸೇನೆ ಮತ್ತು ರೈತ ಸಂಘದಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು. ನಗರದ ಪುರಸಿದ್ದೇಶ್ವರ ದೇವಸ್ಥಾನದಿಂದ ಸಾವಿರಾರು ರೈತರು ಪ್ರತಿಭಟನಾ ಮೆರವಣಿಗೆ ನಡೆಸಿದರು. ಪುರಸಿದ್ದೇಶ್ವರ ದೇವಸ್ಥಾನದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿತು. ಮೆರವಣಿಗೆಯುದ್ದಕ್ಕೂ ರೈತರು ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ವಿವಿಧ ವೃತ್ತಗಳ ಮೂಲಕ ಸಾಗಿಬಂದ ಪ್ರತಿಭಟನೆಯಲ್ಲಿ ಜಿಲ್ಲೆಯ ವಿವಿಧೆಡೆಯಿಂದ ಸಾವಿರಾರು ರೈತರು ಪಾಲ್ಗೊಂಡಿದ್ದರು.

ನಂತರ ಮೈಲಾರ ಮಹದೇವ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.


ಉದಯವಾಹಿನಿ ಚಿತ್ರ

ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯ ಸರ್ಕಾರ ರಾಜ್ಯದಲ್ಲಿನ ಬರದ ಬಗ್ಗೆ ತಲೆಕೆಡಿಸಿಕೊಳ್ಳದೇ ಸಚಿವ ಸಂಪುಟ ವಿಸ್ತರಣೆಯಲ್ಲಿ ತಲೆಕೆಡಿಸಿಕೊಂಡಿದೆ ಎಂದು ರೈತರು ಆರೋಪಿಸಿದರು. ರೈತರ ನೆರವಿಗೆ ಬರಬೇಕಾದ ಜನಪ್ರತಿನಿಧಿಗಳು ಸಚಿವ ಸ್ಥಾನಕ್ಕಾಗಿ ದೆಹಲಿಗೆ ಹೋಗಿದ್ದಾರೆ. ರೈತರ ಸಮಸ್ಯೆ ಆಲಿಸುವ ಕೃಷಿ ಸಚಿವರನ್ನು ಸರ್ಕಾರ ನೇಮಕ ಮಾಡಿಲ್ಲಾ ಎಂದು ರೈತ ಮುಖಂಡರು ಆರೋಪಿಸಿದರು.

ಇದೇ ವೇಳೆ ಮಾತನಾಡಿದ ಹಾವೇರಿ ಜಿಲ್ಲಾ ರೈತಸಂಘ ಹಸಿರುಸೇನೆ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ್ ಬಳ್ಳಾರಿ, ಸರ್ಕಾರಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಬರಗಾಲ ಘೋಷಣೆಯನ್ನು ಕೇವಲ ರಾಜ್ಯ ಸರ್ಕಾರ ಒಂದೇ ಘೋಷಣೆ ಮಾಡುವುದಿಲ್ಲಾ, ಕೇಂದ್ರ ಸರ್ಕಾರದ ಪಾಲೂ ಇದರಲ್ಲಿದೆ.

ರಾಜ್ಯ ಸರ್ಕಾರ ಕೇಂದ್ರದ ಮೇಲೆ ಕೇಂದ್ರ ಸರ್ಕಾರದ ರಾಜ್ಯ ಸರ್ಕಾರದ ಮೇಲೆ ಹಾಕುತ್ತಾ, ಈ ಸರ್ಕಾರಗಳು ರೈತರನ್ನು ಮೂರ್ಖರನ್ನಾಗಿ ಮಾಡುತ್ತಿವೆ ಎಂದು ಆರೋಪಿಸಿದರು.

> ಗ್ರಾಮಗಳಲ್ಲಿದ್ದ ಎಲ್ಲಾ ರೈತರನ್ನು ಕರೆದುಕೊಂಡು ಬಂದು ಪ್ರತಿಭಟನೆ ಮಾಡಲು ಮುಂದಾದರೆ ಹಾವೇರಿ ನಗರದಲ್ಲಿ ಎಲ್ಲಿಯೂ ಜಾಗ ಉಳಿಯಬಾರದು. ಆ ರೀತಿ ಪ್ರತಿಭಟನೆ ಮಾಡೋಣಾ ಎಂದು ಹೇಳಿದರು. -ಮಲ್ಲಿಕಾರ್ಜುನ್ ಬಳ್ಳಾರಿ

# ಕುಡಿಯಲು ನೀರು ಬಿಡಲು ಮನವಿ

• **ಉದಯವಾಹಿನಿ, ಬಳ್ಳಾರಿ, :**

ತುಂಗಭದ್ರ ಬಲದಂಡೆಯ ಮೇಲ್ಮಟ್ಟದ ಕಾಲುವೆ (ಹೆಚ್.ಎಲ್.ಸಿ)ಗೆ ಕುಡಿಯುವ ನೀರು ಬಿಡುವಂತೆ ತುಂಗಭದ್ರ ರೈತ ಸಂಘದಿಂದ ಜಿಲ್ಲಾಧಿಕಾರಿಗಳಿಗೆ ನಿನ್ನೆ ಮನವಿ ಮಾಡಿದೆ. ಸಂಘದ ಅಧ್ಯಕ್ಷ ದರೂರು ಪುರುಷೋತ್ತಮಗೌಡ ಮತ್ತವರ ಸದಸ್ಯರು. ಡಿಸಿಯವರಿಗೆ ಮನವಿ ಸಲ್ಲಿಸಿ. ತುಂಗಭದ್ರ ಬಲದಂಡೆಯ ಮೇಲ್ಮಟ್ಟದ ಕಾಲುವೆ115 ಕಿಲೋಮೀಟರ್ ಕರ್ನಾಟಕದಲ್ಲಿ ಹರಿಯುತ್ತದೆ. ಈ ಕಾಲುವೆಯ ವ್ಯಾಪ್ತಿಗೆ ಕರ್ನಾಟಕದ 16 ಉಪ ಕಾಲುವೆಗಳು ಬರಲಿವೆ. ಈ ಕಾಲುವೆಗಳ ಮುಖಾಂತರ ಕಂಪ್ಲಿ, ಸಂಡೂರು ಹಾಗೂ ಬಳ್ಳಾರಿ ತಾಲ್ಲೂಕಿನ ಗ್ರಾಮಗಳಿಗೆ ಕುಡಿಯು ನೀರಿನ ಕೆರೆಗಳಿಗೆ ನೀರು ಸರಬರಾಜು ಆಗಲಿವೆ.

ಕಳೆದ 2 ತಿಂಗಳಿನಿಂದ ಜಿಲ್ಲೆಗೆ ಮಳೆ ಬಾರದ ಕಾರಣ ಕೆರೆಗಳು ನೀರು ಇಲ್ಲದೇ ಬತ್ತಿಹೋಗಿ ಜನರಿಗೂ ಮತ್ತು ಜಾನುವಾರುಗಳಿಗೂ ಕುಡಿಯು ನೀರಿನ ತೊಂದರೆಯಾಗುತ್ತಿದೆ. ಈಗಾಗಲೇ ತುಂಗಭದ್ರ ಜಲಾಶಯದಿಂದ ಕುಡಿಯುವ ನೀರಿನ ಪ್ರಯುಕ್ತ ತುಂಗಭದ್ರ ಎಡದಂಡೆ ಕಾಲುವೆ (ಎಲ್.ಬಿ.ಎಂ.ಸಿ)ಗೆ 2 ಟಿ.ಎಂ.ಸಿ ನೀರು ಬಿಡಲಾಗಿದೆ ಮತ್ತು ತುಂಗಭದ್ರ ಬಲದಂಡೆಯ ಕೆಳ ಮಟ್ಟದ ಕಾಲುವೆಗೆ ಆಂಧ್ರಪ್ರದೇಶದ 1.50 ಟಿ.ಎಂ.ಸಿ ಮತ್ತು ಕರ್ನಾಟಕದ 0.50 ಟಿ.ಎಂ.ಸಿ ನೀರು ಬಿಡಲಾಗಿದೆ. ತುಂಗಭದ್ರ ಬಲದಂಡೆಯ ಮೆಲ್ಬಟ್ಟಿದ ಕಾಲುವೆ ವ್ಯಾಪ್ತಿಯ ಕಂಪ್ಲಿ, ಸಂಡೂರು, ಬಳ್ಳಾರಿ ತಾಲ್ಲೂಕಿನ ಕುಡಿಯುವ ನೀರಿನ ಕೆರೆಗಳಿಗೆ 8 ದಿನಗಳಿವರೆಗೆ ನಿತ್ಯ 1450 ಕ್ಯುಸಸ್ ನೀರಿನಂತೆ 1 ಟಿ.ಎಂ.ಸಿ ನೀರು ಬಿಡಬೇಕೆಂದು ಮನವಿ ಮಾಡಿದ್ದಾರೆ.

### ಮಾಸಾಶನ ಸ್ಥಗಿತ: ಅಂಗವಿಕಲರ ಆಕ್ರೋಶ, ಮನವಿ ಸಲ್ಲಿಕೆ

• **ಉದಯವಾಹಿನಿ, ಕಾರಟಗಿ:**

‘‘ಸ್ಥಗಿತಗೊಳಿಸಿರುವ ಮಾಸಾಶನ ಮಂಜೂರು ಮಾಡಬೇಕು. ಮಾಸಾಶನ ಹೆಚ್ಚಳ ಮಾಡಬೇಕು. ಆದಾಯ ಮಿತಿ ರದ್ದುಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ, ಕರ್ನಾಟಕ ರಾಜ್ಯ ಅಂಗವಿಕಲರ ಹಾಗೂ ಪಾಲಕರ ಸಮಿತಿಯ ತಾಲ್ಲೂಕು ಘಟಕದ ಪದಾಧಿಕಾರಿಗಳು ಸೋಮವಾರ ಪ್ರತಿಭಟನೆ ನಡೆಸಿ, ಮುಖ್ಯಮಂತ್ರಿಗಳಿಗೆ ಬರೆದಿರುವ ಮನವಿಯನ್ನು ಕಂದಾಯ ಇಲಾಖೆ ಶಿರಸ್ತೇದಾರ ಸಾವಿತ್ರಿಯವರಿಗೆ ಸಲ್ಲಿಸಿದರು. ಸಂಘಟನೆಯ ತಾಲ್ಲೂಕು ಅಧ್ಯಕ್ಷ ಶರಣಪ್ಪ ಜುಟ್ಲದ ಮಾತನಾಡಿ, ’ಆದಾಯ ಮಿತಿ ಹೆಸರಲ್ಲಿ ಮಾಸಾಶನ ನಿಲುಗಡೆ ಮಾಡಿದ್ದು ಸರಿಯಲ್ಲ. ಆದಾಯ ಮಿತಿ ಕೈಬಿಟ್ಟು ತಕ್ಷಣವೇ ಮಾಸಾಶನ ಬಿಡುಗಡೆ ಮಾಡಿ, ಸಂಕಷ್ಟದಲ್ಲಿರುವ ಅಂಗವಿಕಲರ ನೆರವಿಗೆ ಬರಬೇಕು. ಮಾಸಾಶನ ಬಾರದೆ ಔಷಧ, ಪ್ರಯಾಣ, ಚಿಕಿತ್ಸೆ, ಅಗತ್ಯ ಖರ್ಚುಗಳಿಗೂ ಕುಟುಂಬದವರನ್ನು ಆಶ್ರಯಿಸಿ, ಇಲ್ಲವೇ ಸಾಲ ಮಾಡಿ ಜೀವನ ನಡೆಸಬೇಕಿದೆ. ಅಂಗವಿಕಲರ ಗೌರವಯುತ ಹಕ್ಕು ಪಡೆಯಲು ಸಾಹಸ ಮಾಡಬೇಕಾದ ಸ್ಥಿತಿ ಬಂದಿರುವುದು ನಾಚಿಗೇಡಿನ ಸಂಗತಿ. ಅಂಗವಿಕಲರು ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಕ್ಷೇತ್ರಗಳಲ್ಲಿ ತೀರಾ ಹಿಂದುಳಿದಿದ್ದು, ಅವರಿಗೂ ಅವಕಾಶಗಳನ್ನು ನೀಡಲು ಸರ್ಕಾರ ಮುಂದಾಗಬೇಕು’ ಎಂದು ಹೇಳಿದರು.

# ತುಂಗಭದ್ರಾ ಡ್ಯಾಮ್ ಎಡದಂಡೆ ನಿರ್ಲಕ್ಷ್ಯದ ಸಂಕೇತವಾಗಿ ಪರಿಣಮಿಸಿದೆ!

**ಹೆಚ್ಚಿನ ಮಳೆಯಾದರೆ ರಸ್ತೆ ಸಂಪೂರ್ಣ ಕುಸಿಯುವ ಅಪಾಯವಿದೆ ಎಂದು ಸಾರ್ವಜನಿಕರು ಎಚ್ಚರಿಸಿದ್ದಾರೆ**

• **ಉದಯವಾಹಿನಿ, ಕಾರಟಗಿ, :**

ಕಾರಟಗಿ ನಗರದ ಹೃದಯ ಭಾಗದ ಮೂಲಕ ಹರಿಯುವ ತುಂಗಭದ್ರಾ ಡ್ಯಾಮ್ ಎಡದಂಡೆ ಮುಖ್ಯ ಕಾಲುವೆಯ ಉಪ ಕಾಲುವೆ ಇಂದು ಸಂಪೂರ್ಣ ನಿರ್ಲಕ್ಷ್ಯದ ಸಂಕೇತವಾಗಿ ಪರಿಣಮಿಸಿದೆ. ಹಲವು ವರ್ಷಗಳಿಂದ ಸಮರ್ಪಕ ನಿರ್ವಹಣೆ ಇಲ್ಲದ ಪರಿಣಾಮ ಕಾಲುವೆಯಲ್ಲಿ ಅಪಾರ ಪ್ರಮಾಣದ ಬೊಂಗ (ಹೂಳು), ಪ್ಲಾಸ್ಟಿಕ್, ಗೃಹ ತ್ಯಾಜ್ಯ, ಕಸ ಹಾಗೂ ಗಿಡಗಂಟಿಗಳು ತುಂಬಿಕೊಂಡಿದ್ದು, ನೀರಿನ ಹರಿವು ಸಂಪೂರ್ಣ ಅಸ್ತವ್ಯಸ್ತವಾಗಿದೆ. ಇದರಿಂದ ಕಾಲುವೆಯು ಸಾರ್ವಜನಿಕರ ಜೀವಕ್ಕೆ ಅಪಾಯ ಉಂಟುಮಾಡುವ ಸ್ಥಿತಿಗೆ ತಲುಪಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ. ಕಾಲುವೆಯಲ್ಲಿನ ಹೂಳು ಮತ್ತು ಕಸದ ರಾಶಿಯಿಂದ ನೀರು ಸರಾಗವಾಗಿ ಹರಿಯದೇ ಅಲ್ಲಲ್ಲೇ ನಿಂತು ದುರ್ವಾಸನೆ ಬೀರುತ್ತಿದೆ.

**1 :ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿದ್ದು**
**2 :ರೋಗಗಳು ಹರಡುವ ಭೀತಿ**
**3 :ತ್ಯಾಜ್ಯ ನೀರು ಮತ್ತು ಪ್ಲಾಸ್ಟಿಕ್**

ಇದರಿಂದ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿದ್ದು, ಡೆಂಗ್ಯೂ, ಮಲೇರಿಯಾ, ಚಿಕನ್‌ಗುನ್ಯಾ ಸೇರಿದಂತೆ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಎದುರಾಗಿದೆ. ಅಲ್ಲದೆ, ತ್ಯಾಜ್ಯ ನೀರು ಮತ್ತು ಪ್ಲಾಸ್ಟಿಕ್ ಮಿಶ್ರಣದಿಂದ ಪರಿಸರ ಮಾಲಿನ್ಯ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಸುತ್ತಮುತ್ತಲಿನ ನಿವಾಸಿಗಳ ಆರೋಗ್ಯದ ಮೇಲೂ ಪ್ರತಿಕೂಲ ಪರಿಣಾಮ ಬೀರುತ್ತಿದೆ.


ಉದಯವಾಹಿನಿ ಚಿತ್ರ

> ಸಾರ್ವಜನಿಕರ ಸುರಕ್ಷತೆಗಾಗಿ ಕಾಲುವೆ ದಂಡೆಯ ಅಪಾಯಕಾರಿ ಭಾಗಗಳಲ್ಲಿ ತಕ್ಷಣ ಸುರಕ್ಷತಾ ತಡೆಗೋಡೆ ಮತ್ತು ಎಚ್ಚರಿಕೆ ಫಲಕಗಳನ್ನು ಅಳವಡಿಸಬೇಕು.ಮತ್ತು ಕಾಲುವೆ ಸ್ವಚ್ಛತೆ ದೃಷ್ಟಿಯಿಂದ ಪಟ್ಟಣದ ಕಾಲುವೆ ದಡದಲ್ಲಿ ವಾಸಿಸುವ ಜನರ ಮತ್ತು ಕಾಲುವೆಗೆ ಅಂತರದಲ್ಲಿ ಸುರಕ್ಷತಾ ತಂತಿ ಬೇಲಿ ಅಳವಡಿಸಲು ಒತ್ತಾಯಿಸಿದ್ದಾರೆ -ಸ್ಥಳೀಯರು

ಇದಕ್ಕಿಂತಲೂ ಆತಂಕಕಾರಿ ವಿಷಯವೆಂದರೆ, ಕಾಲುವೆಯ ಎರಡೂ ಬದಿಯ ದಂಡೆಗಳು ಹಲವು ಕಡೆ ಕುಸಿಯುತ್ತಿವೆ. ಕೆಲವೆಡೆ ರಸ್ತೆ ಅಂಚಿನವರೆಗೂ ಮಣ್ಣು ಕುಸಿದಿರುವುದು ಕಂಡುಬಂದಿದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ಮಳೆಯಾದರೆ ರಸ್ತೆ ಸಂಪೂರ್ಣ ಕುಸಿಯುವ ಅಪಾಯವಿದೆ ಎಂದು ಸಾರ್ವಜನಿಕರು ಎಚ್ಚರಿಸಿದ್ದಾರೆ. ಇದೇ ರಸ್ತೆಯಲ್ಲಿ ಪ್ರತಿನಿತ್ಯ ಶಾಲಾ ಮಕ್ಕಳು, ಮಹಿಳೆಯರು, ವೃದ್ಧರು ಹಾಗೂ ನೂರಾರು ವಾಹನಗಳು ಸಂಚರಿಸುತ್ತಿದ್ದು, ಯಾವುದೇ ಕ್ಷಣದಲ್ಲಿ ಅನಾಹುತ ಸಂಭವಿಸುವ ಸಾಧ್ಯತೆಯನ್ನು ತಳ್ಳಿಹಾಕಲು ಸಾಧ್ಯವಿಲ್ಲ.

ಮಳೆಗಾಲದಲ್ಲಿ ಕಾಲುವೆಯ ನೀರಿನ ಹರಿವು ಅಡ್ಡಿಯಾದರೆ ನೀರು ಮೇಲಕ್ಕೆ ಉಕ್ಕಿ ಸಮೀಪದ ನಿವಾಸ ಪ್ರದೇಶಗಳಿಗೆ ನುಗ್ಗುವ ಸಾಧ್ಯತೆಯೂ ಇದೆ. ಇದರಿಂದ ಮನೆಗಳು, ಅಂಗಡಿಗಳು ಹಾಗೂ ಸಾರ್ವಜನಿಕ ಆಸ್ತಿಪಾಸ್ತಿಗಳಿಗೆ ಹಾನಿಯಾಗುವ ಭೀತಿ ಎದುರಾಗಿದೆ. ಕಾಲುವೆಯ ಸಾಮರ್ಥ್ಯ ಕಡಿಮೆಯಾಗಿರುವುದರಿಂದ ಅತಿವೃಷ್ಟಿಯ ಸಂದರ್ಭದಲ್ಲಿ ಪ್ರವಾಹದಂತಹ ಪರಿಸ್ಥಿತಿ ನಿರ್ಮಾಣವಾಗಬಹುದು ಎಂದು ಸ್ಥಳೀಯ ನಿವಾಸಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

ಸ್ಥಳೀಯರ ಆರೋಪದಂತೆ, ಈ ಸಮಸ್ಯೆ ಹೊಸದಲ್ಲ. ಹಲವು ಬಾರಿ ಸಂಬಂಧಪಟ್ಟ ನೀರಾವರಿ ಇಲಾಖೆ ಹಾಗೂ ನಗರಸಭೆಯ ಅಧಿಕಾರಿಗಳಿಗೆ ಮೌಖಿಕ ಮತ್ತು ಲಿಖಿತವಾಗಿ ಮನವಿ ಸಲ್ಲಿಸಿದರೂ, ಇದುವರೆಗೆ ಯಾವುದೇ ಶಾಶ್ವತ ಕ್ರಮ ಕೈಗೊಳ್ಳಲಾಗಿಲ್ಲ. ಕೆಲವೊಮ್ಮೆ ಮೇಲ್ನೋಟದ ಸ್ವಚ್ಛತಾ ಕಾರ್ಯ ನಡೆಸಲಾಗಿದ್ದರೂ, ಸಂಪೂರ್ಣ ಹೂಳು ತೆರವು, ದಂಡೆ ಬಲಪಡಿಸುವ ಕಾಮಗಾರಿ ಹಾಗೂ ನಿರಂತರ ನಿರ್ವಹಣೆ ನಡೆಯದ ಕಾರಣ ಸಮಸ್ಯೆ ಮತ್ತಷ್ಟು ಗಂಭೀರವಾಗಿದೆ. ನಗರದ ಸ್ವಚ್ಛತೆ ಹಾಗೂ ಸಾರ್ವಜನಿಕ ಸುರಕ್ಷತೆಯ ದೃಷ್ಟಿಯಿಂದ

ಈ ಉಪ ಕಾಲುವೆಯನ್ನು ತಕ್ಷಣ ವೈಜ್ಞಾನಿಕ ರೀತಿಯಲ್ಲಿ ಅಭಿವೃದ್ಧಿಪಡಿಸುವುದು ಅಗತ್ಯವಾಗಿದೆ. ಕಾಲುವೆಯಲ್ಲಿನ ಬೊಂಗ ಮತ್ತು ಹೂಳನ್ನು ಸಂಪೂರ್ಣವಾಗಿ ತೆರವುಗೊಳಿಸಿ, ಕಾಂಕ್ರೀಟ್ ಅಥವಾ ಕಲ್ಲಿನ ರಕ್ಷಣಾ ಗೋಡೆ ನಿರ್ಮಿಸಿ, ನೀರಿನ ಸುಗಮ ಹರಿವಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು ಎಂದು ನಾಗರಿಕರು ಒತ್ತಾಯಿಸಿದ್ದಾರೆ.

## ಮುನ್ನೆಚ್ಚರಿಕೆ ವಹಿಸಿ

ಅಪಾಯ ಸಂಭವಿಸಿದ ನಂತರ ಕ್ರಮ ಕೈಗೊಳ್ಳುವುದಕ್ಕಿಂತ, ಈಗಲೇ ಮುನ್ನೆಚ್ಚರಿಕೆ ವಹಿಸಿ ಕಾಲುವೆಯನ್ನು ಅಭಿವೃದ್ಧಿಪಡಿಸುವುದು ಅತ್ಯಗತ್ಯ ಎಂದು ಕಾರಟಗಿ ನಗರದ ಸಾರ್ವಜನಿಕರು, ಸೇರಿ ಸಾಮಾಜಿಕ ಹೋರಾಟಗಾರ ಜಾಕೀರ್ ಹುಸೇನ್ ಸಿದ್ದಾಪುರ , ಮತ್ತು ಪರಿಸರ ಪ್ರೇಮಿ ಹನುಮೇಶ್ ಸಿದ್ದಾಪುರ, ಹಾಗೂ ಕಾರಟಗಿ ತಾಲ್ಲೂಕ ಹೊಸ ದಿಗಂತ ನೂತನ ಪತ್ರ ಕರ್ತ ಶರಣಪ್ಪ ಹೊಸಳ್ಳಿ ಸಿದ್ದಾಪುರ ಸಂಬಂಧಪಟ್ಟ ಅಧಿಕಾರಿಗಳಿಗೆ ಆಗ್ರಹಿಸಿದ್ದಾರೆ.

### ರಾಹುಲ್ ಗಾಂಧಿ ಬಂಧನ ಪ್ರಜಾಪ್ರಭುತ್ವದ ಕಗ್ಗೊಲೆ

• **ಉದಯವಾಹಿನಿ, ಯಾದಗಿರಿ:**


ಉದಯವಾಹಿನಿ ಚಿತ್ರ

‘ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಬಂಧನ ಮಾಡಿರುವುದು ಪ್ರಜಾಪ್ರಭುತ್ವದ ಕಗ್ಗೊಲೆ. ಇದು ಆಡಳಿತ ಪಕ್ಷದ ಹತಾಶೆ ಮನೋಭಾವ ತೋರಿಸುತ್ತದೆ’ ಎಂದು ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ ಹೇಳಿದರು. ಇಲ್ಲಿ ಬುಧವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ‘ದೇಶದಲ್ಲಿ ಇವತ್ತು ಪ್ರಜಾಪ್ರಭುತ್ವ ಸಂಪೂರ್ಣವಾಗಿ ನಾಶವಾಗಿದೆ. ಸಂವಿಧಾನಕ್ಕೆ ಏನೂ ಬೆಲೆ ಇಲ್ಲದಂತೆ ಆಗಿದೆ’ ಎಂದು ದೂರಿದರು.

‘ವಿಶ್ವ ಗುರು ಎಂದು ಕರೆಯಿಸಿಕೊಳ್ಳುವ ಪ್ರಧಾನಿ ಮೋದಿ ಅವರಿಗೆ ಸೂಕ್ಷ್ಮತೆ ಇದ್ದಿದ್ದರೆ ಶಿಕ್ಷಣ ಸಚಿವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕಿತ್ತು. ಪರಿಣಿತರನ್ನು ಕರೆಯಿಸಿ ವಿದ್ಯಾರ್ಥಿಗಳ ಜಒ ಜೊತೆಗೆ ಮಾತುಕತೆ ನಡೆಸಿ ಅವರ ಸಲಹೆಗಳನ್ನು ತೆಗೆದುಕೊಂಡು, ವಿದ್ಯಾರ್ಥಿಗಳಿಗೆ ಸಾಂತ್ವನ ಹೇಳಬೇಕಿತ್ತು. ವ್ಯವಸ್ಥೆಯ ಸುಧಾರಣೆಗೆ ಏನೆಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂಬುದರ ಬಗ್ಗೆಯೂ ತಿಳಿಸಿ, ಮಕ್ಕಳ ಜೊತೆಗೆ ನಿಲ್ಲಬೇಕಾಗಿತ್ತು’ ಎಂದರು.

